ಸಂಪುಟ : 10 ಸಂಚಿಕೆ 18 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 18 Pages : 4+2 Price : 3.00 Friday February 14 2025 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 14 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 34, 35 – ಹುಡ್ಕೋ 1, 2, 3ನೇ ಕ್ರಾಸ್‌ಗಳು, ಹನುಮಂತ ದೇವರು ಗುಡಿ, ಈಶ್ವರ ಗುಡಿ, ಇ ಡಬ್ಲ್ಯೂ ಎಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ಗಂಗಿಮಡಿ, ಅಪಾರ್ಟ್ಮೆಂಟ್, ದೊಡ್ಡಮಸೂತಿ ಭಾಗಗಳು. ವಾರ್ಡ್ ನಂ. 33 – ಜಾಕೀರ್ ಹುಸೇನ್ ಕಾಲೋನಿ, ಕರಿಗೌಡ್ರ ಲೈನ್, ಪಂಚಮುಖಿ ದೇವರ ಗುಡಿ, ಪಿಡ್ಡಿಯವರ ಲೈನ್, ಮುಳಗುಂದ ರಸ್ತೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ದೇವಗಿರಿ ಸರ್ ಲೈನ್, ಸಂತೋಷ ಕಿರಾಣಿ ಸ್ಟೋರ್, ಅಪಾರ್ಟ್ಮೆಂಟ್, ಕಟ್ಟಿಯವರ ಲೈನ್, ಅಬ್ಬಿಗೇರಿ ಲೈನ್, ಗವಾಯಿಗಳ ಆಶ್ರಮದ ಮುಂದಿನ ಭಾಗ, ಸೊಲ್ಲಾಪಟ್ಟಿ ಲೈನ್, ಕೃಷ್ಣ ಟ್ಯೂಷನ್ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 6, 10 – ಸಿಹಿ ನೀರಿನ ಬಾವಿ ಸೆಟ್, ಒಕ್ಕಲಗೇರಿ, ಗಾರ್ಗಿಪೇಟೆ, ಚೆನ್ನಬಸಪ್ಪನ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಪರಶು ಅವರ ಲೈನ್, ಪಾಪಡೆ ಅವರ ಲೈನ್, ಬನ್ನಿ ಕಟ್ಟಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 27 – ಸಂಭಾಪುರ ರಸ್ತೆ, ಪೊಲೀಸ್ ಕ್ವಾರ್ಟರ್ಸ್, ಮುತ್ತಿನ ಪೆಂಡಿಯವರ ಲೈನ್, ಎಸ್ ಪಿ ಆಫೀಸ್, ರೋಣದವರ ಲೈನ್, ಕೇಶವ ನಗರ, ಪುಟ್ಟರಾಜನಗರ, ಸಂಕಣ್ಣವರ್ ಲೇಔಟ್, ಟಿ ವಿ ಎಸ್ ಶೋರೂಮ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಮತ್ತು ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿರಾಗ್‌ಗೆ 'ಸ್ವರ್ಣ ಕಲಾರತ್ನ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷರದೀಪ ಫೌಂಡೇಶನ್ ಗದಗ ಮತ್ತು ಸ್ನೇಹಜೀವಿ ಫೌಂಡೇಶನ್ ಮುಂಬೈ ಕರ್ನಾಟಕ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಕ್ರೇಜಿ ಟ್ಯಾಲೆಂಟ್-5 ರಾಷ್ಟ್ರಮಟ್ಟದ ಆನ್‌ಲೈನ್ ಪ್ರತಿಭಾನ್ವೇಷಣೆಯ ಚಿತ್ರಕಲಾ ಸ್ಪರ್ಧೆಯಲ್ಲಿ ಗದಗ ವಿವೇಕಾನಂದ ನಗರದ ನಿವಾಸಿಗಳಾದ ಶಿಲ್ಪಾ-ವಿಜಯಕುಮಾರ್ ಆರ್ ದಂಪತಿಗಳ ಪುತ್ರ ಚಿರಾಗ್ ವಿಜಯಕುಮಾರ್ ಆರ್ ಸ್ಪರ್ಧಿಸಿ ವಿಜೇತನಾಗಿದ್ದಾನೆ.

ವಿದ್ಯಾರ್ಥಿಯ ಈ ಪ್ರತಿಭೆಯನ್ನು ಗುರುತಿಸಿ 'ಸ್ವರ್ಣ ಕಲಾರತ್ನ' ಪ್ರಶಸ್ತಿ ಹಾಗೂ ಪದಕವನ್ನು ನೀಡಿ ಗೌರವಿಸಲಾಗಿದೆ ಎಂದು ಅಕ್ಷರದೀಪ ಫೌಂಡೇಶನ್ ಅಧ್ಯಕ್ಷ ಪ್ರವೀಣಕುಮಾರ ಕನ್ಯಾಳ ಹಾಗೂ ಸ್ನೇಹಜೀವಿ ಫೌಂಡೇಶನ್ ನಿರ್ದೇಶಕಿ ಶೈಲಜಾ ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ನೌಕರರ ಕ್ರೀಡಾಕೂಟದ ಪೂರ್ವ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

ಕ್ರೀಡಾಕೂಟದಿಂದ ಒಗ್ಗಟ್ಟಿನ ಮನೋಭಾವ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 8 ಮತ್ತು 9ರಂದು ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ನಡೆಯಲಿದ್ದು, ಇದನ್ನು ಯಶಸ್ವಿಯಾಗಿ ಆಯೋಜಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಆಯೋಜನೆ ಕುರಿತಂತೆ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೌಕರರೆಲ್ಲರೂ ಈ ಕ್ರೀಡಾಕೂಟದಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಕ್ರೀಡಾ ಸ್ಫೂರ್ತಿಯನ್ನು ಮೆರೆಯಬೇಕು. ಕ್ರೀಡಾಕೂಟದಿಂದ ಆರೋಗ್ಯ ವೃದ್ಧಿಯಾಗುವುದಲ್ಲದೆ, ಸರ್ಕಾರಿ ನೌಕರರಲ್ಲಿ ಒಗ್ಗಟ್ಟಿನ ಮನೋಭಾವವೂ ಹೆಚ್ಚಳವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಕ್ರೀಡಾ ಸ್ಪರ್ಧೆಗಳನ್ನು ಹಮ್ಮಿಕೊಳ್ಳುವುದರ ಜೊತೆ-ಗೆ, ಸಂಜೆ ವೇಳೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗುತ್ತಿದೆ. ಇದು ನೌಕರರ ಪ್ರತಿಭೆ ಪ್ರದರ್ಶಿಸಲು ಉತ್ತಮ ವೇದಿಕೆ ಒದಗಿಸಲಿ ಎಂದರು.

ಈ ಕ್ರೀಡಾಕೂಟ ಯಶಸ್ವಿಯಾಗಿ ನಡೆಯಲು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಸಹಕರಿಸಬೇಕು. ಕ್ರೀಡಾಕೂಟ ಆಯೋಜನೆ ಕುರಿತಂತೆ ಸಂಬಂಧಿಸಿದ ಇಲಾಖೆಗಳು ಅಗತ್ಯದ ಕ್ರಮಗಳನ್ನು ಕೈಗೊಳ್ಳುವ ಮೂಲಕ ಕ್ರೀಡಾಕೂಟ ಅಚ್ಚುಕಟ್ಟಾಗಿ ಜರುಗುವಂತೆ ನಿಗಾ ವಹಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಮಾರ್ಚ್ 8 ಹಾಗೂ 9ರಂದು ಕ್ರೀಡಾಕೂಟ ಆಯೋಜಿಸಿ, ಅತಿಥಿಗಳನ್ನು ಅಚ್ಚುಕಟ್ಟಾಗಿ ಆಹ್ವಾನಿಸಿ ಕ್ರೀಡಾಪಟುಗಳು ಕ್ರೀಡಾ ಸ್ಫೂರ್ತಿಯ ಮೂಲಕ ಗಮನ ಸೆಳೆಯುವಂತಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಹೇಳಿದರು.

ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಸಹ ನೌಕರರು ಕ್ರೀಡಾಕೂಟದಲ್ಲಿ ಭಾಗವಹಿಸಲು ನಿಗದಿಪಡಿಸಿದ ವೆಬ್ಸೈಟ್ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದರು.

> ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ರವಿ ಗುಂಜಿಕರ ಮಾತನಾಡಿ, ಗದಗ ಜಿಲ್ಲೆಯಲ್ಲಿ ಆಯೋಜಿಸುವ ನೌಕರರ ಕ್ರೀಡಾಕೂಟವು ಎಲ್ಲರೂ ನೆನಪಿಡುವಂತಾಗಬೇಕು. ಉತ್ತಮ ಆಯೋಜನೆಯ ಮೂಲಕ ನೌಕರರಲ್ಲಿ ಅಡಗಿರುವ ಪ್ರತಿಭೆಯ ಅನಾವರಣಕ್ಕೆ ವೇದಿಕೆಯಾಗಬೇಕು. ಆ ಮೂಲಕ ಗದಗ ಜಿಲ್ಲೆಯ ಸರ್ಕಾರಿ ನೌಕರರು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಲು ಈ ಕ್ರೀಡಾಕೂಟ ಸಹಕಾರಿಯಾಗಲಿ ಎಂದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಉಪ ವಿಭಾಗಾಧಿಕಾರಿ ಗಂಗಪ್ಪ ಸೇರಿದಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ದಿಢೀರ್ ದಾಳಿ!

ತುಂಗಭದ್ರಾ ನದಿ ಬಗೆದು ಅಕ್ರಮ ಮರಳು ಲೂಟಿ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಗದಗ ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆಕೋರರಿಗೆ ಹೇಳೋರು ಕೇಳೋರು ಇಲ್ಲದಂತಾಗಿದೆ. ಅವರು ಆಡಿದ್ದೇ ಆಟವಾಗಿದೆ. ಅದರಂತೆ ಮುಂಡರಗಿ ತಾಲೂಕಿನ ತುಂಗಭದ್ರಾ ನದಿ ತೀರದಲ್ಲಿ ಅಕ್ರಮ ಮರಳು ಸಂಗ್ರಹ ಮಾಡುವ ಕೆಲಸ ಭರ್ಜರಿಯಾಗಿ ನಡೆದಿದೆ. ಹಗಲು, ರಾತ್ರಿ ಎನ್ನದೇ ದುಷ್ಕರ್ಮಿಗಳು, ಮರಳು ಲೂಟಿ ನಡೆಸಿದ್ದಾರೆ.

ಬುಧವಾರ ಬೆಳಗಿನ ಜಾವ ಖಚಿತ ಮಾಹಿತಿ ಆಧರಿಸಿ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ದಾಳಿ ನಡೆಸಿ ಅಕ್ರಮ ಮರಳು ದಂಧೆಕೋರರಿಗೆ ಶಾಕ್ ಕೊಟ್ಟಿದ್ದಾರೆ.

ಈ ದಂಧೆಕೋರರು, ಮುಂಡರಗಿ ತಾಲೂಕಿನ ಸಿಂಗಟಾಲೂರ ಗ್ರಾಮದ ಬಳಿಯ ತುಂಗಭದ್ರಾ ನದಿ ಬಗೆದು ಅಕ್ರಮ ಮರಳು ಲೂಟಿ ಮಾಡುತ್ತಿದ್ದರು. ಕಳೆದ ಒಂದು ತಿಂಗಳಿಂದ ರಾಜಾರೋಷವಾಗಿ ನದಿಯಲ್ಲಿ ಈ ಕೃತ್ಯ ಎಸಗುತ್ತಿದ್ದರು.

ಇನ್ನೂ ಅಕ್ರಮ ಮರಳು ದಂಧೆ ಬಗ್ಗೆ ಮಾಹಿತಿ ಇದ್ರೂ ತಾಲೂಕಾಡಳಿತ ಮಾತ್ರ ಕಂಡು ಕಾಣದಂತೆ ಮೌನವಹಿಸಿತ್ತು. ಅಷ್ಟೇ ಅಲ್ಲದೇ ಮುಂಡರಗಿ ಕಂದಾಯ ಇಲಾಖೆ ಅಧಿಕಾರಿಗಳು, ಅಕ್ರಮ ಮರಳು ದಂಧೆಕೋರರ ಜೊತೆ ಶಾಮೀಲಾಗಿರುವ ಆರೋಪವೂ ಕೇಳಿ ಬಂದಿತ್ತು. ಹೀಗಾಗಿ ದೂರು ಆಧರಿಸಿ ಸ್ವತಃ ಗದಗ ಡಿಸಿ ಸಿ ಎನ್ ಶ್ರೀಧರ್, ಎಸಿ ಗಂಗಪ್ಪ ಅಕ್ರಮ ಮರಳು ಅಡ್ಡೆ ಮೇಲೆ ದಾಳಿ ನಡೆಸಿದ್ದು, ಖಾಸಗಿ ವಾಹನದಲ್ಲಿ ತೆರಳಿ ದಂಧೆಕೋರರಿಗೆ ಶಾಕ್ ನೀಡಿದರು. ದಾಳಿ ವೇಳೆ ಅಕ್ರಮ ಮರಳು ಸಾಗಾಟ ಮಾಡುತ್ತಿದ್ದ ಎರಡು ಟ್ರ್ಯಾಕ್ಟರ್ ಗಳು ಸೇರಿ ಅಕ್ರಮವಾಗಿ ಸಂಗ್ರಹಿಸಿದ ಅಪಾರ ಪ್ರಮಾಣದ ಮರಳು ಸೀಜ್ ಮಾಡಿದ್ದಾರೆ.

ಡಿಸಿ ದಾಳಿ ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಮುಂಡರಗಿ ತಹಸೀಲ್ದಾರ್ ಯರ್ರಿಸ್ವಾಮಿ ದೌಡಾಯಿಸಿದರು. ಸ್ಥಳಕ್ಕೆ ಭೇಟಿ ನೀಡಿದ ತಹಸೀಲ್ದಾರ ಅವರಿಗೆ ಅಕ್ರಮ ಮರಳು ದಂಧೆ ನಡೆಯದಂತೆ ನೋಡಿಕೊಳ್ಳುವಂತೆ ತಾಕೀತು ಮಾಡಿದರು.

ಪೊಲೀಸರ ಮುಂದೆಯೇ ಕೈ-ಕೈ ಮಿಲಾಯಿಸಿದ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು!

■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಪುರಸಭೆ ಅಧ್ಯಕ್ಷ ಗಾದಿಗಾಗಿ ನಡೆದ ಚುನಾವಣೆ ಸಂದರ್ಭದಲ್ಲಿ ಪೊಲೀಸರೆದುರೇ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ಹೊಡೆದಾಡಿಕೊಂಡಿರುವ ಘಟನೆ ಜೇವರ್ಗಿಯಲ್ಲಿ ನಡೆದಿದೆ.

23 ಸದಸ್ಯರ ಪುರಸಭೆಯಲ್ಲಿ 17 ಬಿಜೆಪಿ, 3 ಜೆಡಿಎಸ್, 3ರಲ್ಲಿ ಕಾಂಗ್ರೆಸ್ ಗೆದ್ದಿತ್ತು. ಆದರೆ ಕೊನೆಗಳಿಗೆಯಲ್ಲಿ 7ಕ್ಕೂ ಅಧಿಕ ಸದಸ್ಯರು ಬಿಜೆಪಿಗೆ ಕೈಕೊಟ್ಟು ಎಆಖ ಗೆ ಬೆಂಬಲ ನೀಡಿದ್ದರಿಂದ ಜೆಡಿ ಎಸ್ ಪಕ್ಷ ಅಧಿಕಾರದ ಗದ್ದುಗೆ ಏರಿತು. ಇದರಿಂದಾಗಿ ಜೆಡಿ ಎಸ್ ಹಾಗೂ ಬಿಜೆಪಿ ಪಕ್ಷದ ಕಾರ್ಯಕರ್ತರ ಮಧ್ಯೆ ಗಲಾಟೆ ಉಂಟಾಗಿ ಪೊಲೀಸರ ಎದುರೇ ಹೊಡೆದಾಡಿಕೊಂಡಿದ್ದಾರೆ. ಕೊನೆಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರಾಗಿ ಜೆಡಿಎಸ್ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ. ಪುರಸಭೆ ಅಧ್ಯಕ್ಷರಾಗಿ ಗುರುಲಿಂಗಪ್ಪಗೌಡ ಮಾಲಿಪಾಟೀಲ್ ಹಾಗೂ ಉಪಾಧ್ಯಕ್ಷರಾಗಿ ಗಂಗೂಬಾಯ್ ಸತ್ಕಾರ್ ಆಯ್ಕೆಯಾಗಿದ್ದಾರೆ.

ಸೈಬರ್ ಸುರಕ್ಷತೆಯ ಬಗ್ಗೆ ಗಮನವಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್, ಭಾರತ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ತಂತ್ರಜ್ಞಾನ ರಾಷ್ಟ್ರೀಯ ಮಾಹಿತಿ ಶಾಸ್ತ್ರ ಕೇಂದ್ರ (ಎನ್.ಐ.ಸಿ) ಹಾಗೂ ಸೈಬರ್ ಸೆಕ್ಯುರಿಟಿ ಸೆಲ್ ಪೊಲೀಸ್ ಠಾಣೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಅಂತರ್ಜಾಲ ಸುರಕ್ಷತಾ ದಿನವನ್ನು ಆಚರಿಸಲಾಯಿತು.

ರಾಷ್ಟ್ರೀಯ ಮಾಹಿತಿ ಶಾಸ್ತ್ರ ಕೇಂದ್ರದ ಜಂಟಿ ನಿರ್ದೇಶಕ ಸತೀಶ ನಾಯ್ಕ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಅಂತರ್ಜಾಲದ ಮುಖಾಂತರ ಹಣ ಕಳೆದುಕೊಳ್ಳುವವರ ಸಂಖ್ಯೆ ಜಾಸ್ತಿಯಾಗಿದ್ದು, ಸುಳ್ಳು ಎಪಿಕೆ ಫೈಲ್, ಆನ್‌ಲೈನ್ ಉದ್ಯೋಗ, ಕೆ.ವಾಯ್.ಸಿ ಮಾಹಿತಿ, ಆದಾಯ ತೆರಿಗೆ ಎಂದು ಸುಳ್ಳು ಹೇಳಿ ಮಾಹಿತಿ ಪಡೆದು ಜನರಿಗೆ ಮೋಸ ಮಾಡುತ್ತಿದ್ದಾರೆ. ಆದ್ದರಿಂದ ಜನರು ಅಂತರ್ಜಾಲದ ಬಳಕೆಯ ಬಗ್ಗೆ ಸಂಪೂರ್ಣ ಮಾಹಿತಿ ಮತ್ತು ಸುರಕ್ಷತೆಯ ಬಗ್ಗೆ ಗಮನ ಹರಿಸಬೇಕೆಂದು ಅಭಿಪ್ರಾಯಪಟ್ಟರು.

ಸೈಬರ್ ಪೊಲೀಸ್ ಠಾಣ್ಯ ಇನ್ಸಪೆಕ್ಟರ್ ಎಸ್.ಎಂ. ಶಿರಗುಪ್ಪಿ ಮಾತನಾಡಿ, ಸೈಬರ್ ಅಪರಾಧಗಳು ವಿದ್ಯಾವಂತರಲ್ಲಿಯೇ ಹೆಚ್ಚುತ್ತಿರುವದು ಅತಂಕಾರಿ ವಿಷಯವಾಗಿದೆ. ಅಪರಿಚತ ಸಂಖ್ಯೆಗಳಿಂದ ಬರುವ ಕರೆಗಳು, ವಿಡಿಯೋ ಕರೆಗಳು, ವಾಟ್ಸಪ್ ಸಂದೇಶಗಳ ಬಗ್ಗೆ ಜಾಗರೂಕರಾಗಿರಬೇಕೆಂದು ಜ್ಞಾಪಿಸಿದರು.

ಸಂಸ್ಥೆಯ ಪ್ರಾಚಾರ್ಯ ಕೆ.ಎನ್. ರೇವಣಕರ ಮಾತನಾಡಿದರು. ಕಾರ್ಯಕ್ರಮದಲ್ಲಿ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಜಹೀರ ಕಮಾನಗಾರ, ತಬಸ್ಸುಮ್ ಸವಣೂರ, ಎಸ್.ಎ. ತಡೂಳ, ಸಂಜೀವ ವಡೆಯರ ಉಪಸ್ಥಿತರಿದ್ದರು. ಕುಮಾರಸ್ವಾಮಿ ಹಿರೇಮಠ ನಿರೂಪಿಸಿದರು. ಆರ್.ಎಸ್. ಲಾಯದಗುಂದಿ ವಂದಿಸಿದರು.

ಅಡವೀಂದ್ರ ಮಠದಲ್ಲಿ ಮಾಸಿಕ ಶಿವಾನುಭವ ಕಾರ್ಯಕ್ರಮ

ಮಾತೃಭೂಮಿಯನ್ನು ಪ್ರೀತಿಸಿ ಗೌರವಿಸಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಮನ-ಮನೆ ಸುಸಂಸ್ಕೃತವಾದರೆ ದೇಶವೇ ಸಂಸ್ಕಾರವಾದಂತೆ ಎಂದು ಪ್ರಾಚಾರ್ಯ ಮಾರುತಿ ಕಟ್ಟಿಮನಿ ಹೇಳಿದರು.

ಅವರು ನಗರದ ಅಡವೀಂದ್ರ ಮಠದ ಸಂಸ್ಕಾರಭಾರತಿ ಕರ್ನಾಟಕ ಉತ್ತರ ಸಹಯೋಗದಲ್ಲಿ ಭಾರತ ಮಾತಾ ಪೂಜೆ, 332ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಮಾತೃಭೂಮಿ ವಿಷಯವಾಗಿ ಮಾತನಾಡಿದರು.

ಕವಿ ಬಂಕಿಮಚಂದ್ರರು ವಂದೇ ಮಾತರಂ ಗೀತೆಯಲ್ಲಿ ಭಾರತಮಾತೆಯನ್ನು ವರ್ಣಿಸಿದ್ದು, ವೇದದಲ್ಲಿ ಈ ಭೂಮಿ ನಮ್ಮ ತಾಯಿ, ಆಕಳು ನಮ್ಮ ತಾಯಿ ಎಂದಿದ್ದಾರೆ. ಆದ್ದರಿಂದ ನಾವಿಂದು ಮಾತೃಭೂಮಿಯನ್ನು ಪ್ರೀತಿಸಬೇಕು, ಗೌರವಿಸಬೇಕು. ಇಡೀ ಜಗತ್ತಿಗೆ ಭಾರತ ಶ್ರೇಷ್ಠವಾದದ್ದು, ಪವಿತ್ರವಾದದ್ದು. ಅದಕ್ಕಾಗಿಯೇ ನಮ್ಮ ದೇಶದ ಪ್ರತಿ ನದಿಗಳನ್ನೂ ತಾಯಿಯ ಹೆಸರುಗಳಿಂದ ಕರೆದಿದ್ದೇವೆ ಎಂದರು.

ಸಂಸ್ಕಾರ ಭಾರತೀ ಗದಗ ಜಿಲ್ಲಾ ಅಧ್ಯಕ್ಷ ಪಿ.ಎ. ಕುಲಕರ್ಣಿ ಅವರು ಸಂಸ್ಕಾರ ಭಾರತೀ ಸಂಸ್ಥೆಯ ಕಾರ್ಯಚಟುವಟಿಕೆ ಪ್ರತಿ ಮನೆಗೆ ತಲುಪಿ ದೇಶಾಭಿಮಾನ ಬೆಳೆಸುವ ಕುರಿತು ಮಾತನಾಡಿದರು.

ಇದೇ ಸಂದರ್ಭದಲ್ಲಿ ಸಮಾಜಸೇವಾ ಭೂಷಣ ಪ್ರಶಸ್ತಿ ವಿಜೇತರಾದ ಗದುಗಿನ ಜ.ತೋಂಟದಾರ್ಯ ವಿದ್ಯಾ ಪೀಠದ ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಅವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ದೇಶಾಭಿಮಾನ, ಮಾತೃಋಣ ಪ್ರತಿ ನಾಗರಿಕರಲ್ಲಿ ಬೆಳೆಯಬೇಕು. ಸಾಮಾಜಿಕ ಸೇವಾ ಮನೋಭಾವನೆ ಬೆಳೆದರೆ ದೇಶಾಭಿಮಾನ ಬೆಳೆಯುವದು ಎಂದರು.

ಶಿವಾನುಭವ ಸಮಿತಿಯ ಅಧ್ಯಕ್ಷ ಡಾ. ಎಸ್.ಕೆ. ನಲವತ್ವಾಡಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಭೆಯ ಸಮ್ಮುಖ ವಹಿಸಿದ್ದ ಪೂಜ್ಯ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಆಶೀರ್ವಚನ ನೀಡಿದರು. ಸಿದ್ಧಣ್ಣ ಜವಳಿ ಪ್ರಾರ್ಥಿಸಿದರು, ಪ್ರಧಾನ ಕಾರ್ಯದರ್ಶಿ ಬಿ.ಬಿ. ತೋಟಗೇರ ಸ್ವಾಗತಿಸಿದರು. ಪಿ.ಬಿ. ಬಂಡಿ ನಿರೂಪಿಸಿ ವಂದಿಸಿದರು.

ವೋಲ್ವೋದಿಂದ 1,400 ಕೋಟಿ ರೂ. ಹೂಡಿಕೆ: ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಒಡಂಬಡಿಕೆಗೆ ಅಂಕಿತ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಸ್ ಮತ್ತು ಟ್ರಕ್ ತಯಾರಿಕೆಗೆ ಹೆಸರಾಗಿರುವ ಸ್ವೀಡನ್ ಮೂಲದ ವೋಲ್ವೋ ಕಂಪನಿಯು ಹೊಸಕೋಟೆಯಲ್ಲಿರುವ ತನ್ನ ತಯಾರಿಕಾ ಸ್ಥಾವರವನ್ನು ವಿಸ್ತರಿಸಲು ತೀರ್ಮಾನಿಸಿದ್ದು, ಇದಕ್ಕಾಗಿ 1,400 ಕೋಟಿ ರೂ. ಬಂಡವಾಳ ಹೂಡಿಕೆ ಮಾಡುವುದಾಗಿ ಘೋಷಿಸಿದೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಅವರ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಗುರುವಾರ ಒಡಂಬಡಿಕೆಗೆ ಅಂಕಿತ ಬಿದ್ದಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರ ಉಪಸ್ಥಿತಿಯಲ್ಲಿ ಈ ಪ್ರಕ್ರಿಯೆ ನೆರವೇರಿತು. ಒಡಂಬಡಿಕೆಗೆ ಸರಕಾರದ ಪರವಾಗಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ವೋಲ್ವೋ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಕಮಲ್ ಬಾಲಿ ಸಹಿ ಹಾಕಿದರು.

ಇಲ್ಲಿನ ಅರಮನೆ ಆವರಣದಲ್ಲಿ ನಡೆಯುತ್ತಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಸಕ್ರಿಯವಾಗಿರುವ ವೋಲ್ವೋ ಸಂಸ್ಥೆ, ಅದರ ಭಾಗವಾಗಿ ಈ ಪ್ರಮುಖ ಒಪ್ಪಂದಕ್ಕೆ ಸಹಿ ಹಾಕಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, 'ವೋಲ್ವೋ ಕಂಪನಿಯು 25 ವರ್ಷಗಳ ಹಿಂದೆಯೇ ರಾಜ್ಯಕ್ಕೆ ಬಂದು, ಬಂಡವಾಳ ಹೂಡಿ, ಬದಲಾವಣೆಗೆ ನಾಂದಿ ಹಾಡಿತು. ಈಗ ನಮ್ಮಲ್ಲಿ ವೋಲ್ವೋ ಎನ್ನುವುದು ಉತ್ಕೃಷ್ಟ ಗುಣಮಟ್ಟದ ಬಸ್ಸುಗಳಿಗೆ ಇನ್ನೊಂದು ಹೆಸರಾಗಿದೆ. ರಾಜ್ಯ ಸಾರಿಗೆ ನಿಗಮದ ಐಷಾರಾಮಿ ಬಸ್ಸುಗಳನ್ನು ಕೂಡ ಜನ ಇದೇ ಹೆಸರಿನಿಂದ ಕರೆಯುತ್ತಿದ್ದಾರೆ. ವೋಲ್ವೋ ಕಂಪನಿಗೆ ಸರಕಾರ ಅಗತ್ಯ ಸೌಲಭ್ಯ ಮತ್ತು ನೆರವು ಒದಗಿಸಲಿದೆ. ಕಂಪನಿಯು ತನ್ನಲ್ಲಿ ಹೆಚ್ಚಿನ ಕನ್ನಡಿಗರಿಗೆ ಕೆಲಸ ಕೊಡಬೇಕು. ಇದರಿಂದ ಸ್ಥಳೀಯರಿಗೆ ಭದ್ರತೆ ಮತ್ತು ಆರ್ಥಿಕ ಬೆಳವಣಿಗೆ ಎರಡನ್ನೂ ಸಾಧಿಸಬಹುದು' ಎಂದರು.

ವೋಲ್ವೋ ಸಿಇಒ ಮಾರ್ಟಿನ್ ಲುಂಡ್ಸ್ಟೆಡ್ ಮಾತನಾಡಿ, 'ಕರ್ನಾಟಕದಲ್ಲಿ ಕಂಪನಿಯು ಪೀಣ್ಯ, ಹೊಸಕೋಟೆ ಮತ್ತು ಧಾರವಾಡ ಸಮೀಪದ ಪೀತಂಪುರದಲ್ಲಿ ತಯಾರಿಕಾ ಘಟಕಗಳನ್ನು ಹೊಂದಿದೆ. ಈಗ ನಾವು ವರ್ಷಕ್ಕೆ ಇಲ್ಲಿ 3,000 ಬಸ್/ಟ್ರಕ್ ತಯಾರಿಸುತ್ತಿದ್ದೇವೆ. ಹೊಸಕೋಟೆ ಸ್ಥಾವರದ ವಿಸ್ತರಣೆಯಿಂದ ನಾವು ವರ್ಷಕ್ಕೆ 20 ಸಾವಿರ ಬಸ್/ಟ್ರಕ್ ತಯಾರಿಸಬಹುದು. ಈ ಸಾಮರ್ಥ್ಯ ವೃದ್ಧಿಯಿಂದ ಉದ್ಯೋಗ ಸೃಷ್ಟಿಯೂ ಆಗಲಿದ್ದು, ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತ ಮತ್ತು ಕರ್ನಾಟಕದ ಸ್ಥಾನ ಮತ್ತಷ್ಟು ಸುಭದ್ರವಾಗಲಿದೆ. ಜತೆಗೆ ಸ್ಥಳೀಯ ಮಾರುಕಟ್ಟೆ ಅಗತ್ಯಗಳನ್ನೂ ಸರಾಗವಾಗಿ ಪೂರೈಸಲು ಸಾಧ್ಯವಾಗಲಿದೆ' ಎಂದರು.

ಬೆಂಗಳೂರು ವೋಲ್ವೋ ಕಂಪನಿಯ ಪಾಲಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ 4ನೇ ಅತಿದೊಡ್ಡ ತಾಣವಾಗಿದೆ. ಇಲ್ಲಿರುವ ನಮ್ಮ ಜಿಸಿಸಿ ಕೇಂದ್ರದಲ್ಲಿ 3,500ಕ್ಕೂ ಹೆಚ್ಚು ಮಂದಿ ಕೆಲಸ ಮಾಡುತ್ತಿದ್ದು, ಇಲ್ಲಿ ಆರ್ & ಡಿ, ಐಟಿ, ಖರೀದಿ, ಲಾಜಿಸ್ಟಿಕ್ಸ್ ಮತ್ತು ಹಣಕಾಸು ಸೇವೆಗಳನ್ನು ನಿರ್ವಹಿಸಲಾಗುತ್ತಿದೆ. ಇದಲ್ಲದೆ ಮಧ್ಯಪ್ರದೇಶದಲ್ಲಿ ಕೂಡ ಜಂಟಿ ಸಹಭಾಗಿತ್ವದ ಯೋಜನೆ ಜಾರಿಯಲ್ಲಿದೆ. ಕಂಪನಿಯ ವಹಿವಾಟು ಈಗ ವರ್ಷಕ್ಕೆ 50 ಬಿಲಿಯನ್ ಡಾಲರ್ ದಾಟಿದೆ ಎಂದು ಅವರು ತಿಳಿಸಿದ್ದಾರೆ.

ಕವನ

ಓ ನನ್ನ ನಲ್ಲೆ

ಓ ನನ್ನ ನಲ್ಲೆ
ನೀ ಎಲ್ಲಿರುವೆ ನಲ್ಲೆ
ಈ ಕನಸುಗಾರನ ಹೃದಯಕ್ಕೆ
ಬಾ ಬೇಗನೇ ನಲ್ಲೆ
ಈ ಪೆನ್ ಕಾಗದದ ಹಾಳೆ
ನಮ್ಮ ಪ್ರೀತಿಯ ಸಂದೇಶದ ಓಲೆ
ಕನಸಿಗೆ ಬಂದು ಹೋಗಬೇಡ ನಲ್ಲೆ
ನನಸಿಗೆ ಬಾರೇ ನನ್ನ ಪ್ರೀತಿಯ ನಲ್ಲೆ
ಆ ಚಂದಿರನ ಬೆಳಕಿನಲ್ಲಿ
ನಿನ್ನ ಬಿಂಬವೇ ನಲ್ಲೆ
ಎಲ್ಲಿರುವೆಯೇ ನಲ್ಲೆ
ನನ್ನ ಪ್ರೀತಿಯ ನಲ್ಲೆ
ನೆನಪುಗಳು ಸವಿ ನೆನಪಾಗಿರಲಿ
ಕನಸುಗಳು ಬಂದು ಹೋಗದ್ ಇರಲಿ ನಲ್ಲೆ
ದೇವಸ್ಥಾನದ ಘಂಟೆಗಳ ಶಬ್ದ ನೆನಪಾಯಿತು ನಲ್ಲೆ
ನೀ ಬರುವೆಯೆಂದು ಕಾದಿರುವೆ ಇಲ್ಲೇ

– ವಿ.ಎಂ.ಎಸ್. ಗೋಪಿ.
ಲೇಖಕರು, ಬೆಂಗಳೂರು.

ಕವನ

ಮೈಕ್ರೋಫೈನಾನ್ಸ್ ಸಾಲ ಮಾಡಬಾರದೋ!

ಮೈಕ್ರೋಫೈನಾನ್ಸ್ ಸಾಲ
ಮೀಟರ್ ಬಡ್ಡಿಗೆ ಸಾಲ
ಮಾಡಬಾರದೋ
ಸಾಲನ ಮಾಡಿ ಮಂಗ್ಯಾ ಆಗಬಾರದೋ

ಮನಿ ಹತ್ರ ಬಂದು ಬಂದು ಸಾಲ ಕೊಡತಾರೋ ಯಪ್ಪ
ಆಧಾರ ಸಾಲ ಬೇಕೋ ಆಧಾರ ಇಲ್ದ ಸಾಲ ಬೇಕೋ
ಬಡ್ಡಿಗೆ ಬಡ್ಡಿ ಬೆಳೆಸಿ, ಕುತಗಿನ ಕೊಯ್ತಾರಪ್ಪ
ಸಾಲಕ್ಕ ರೊಕ್ಕ ಕಟ್ಟಿ, ಊರ ಬಿಟ್ಟೋಗ್ಯಾರಪ್ಪ
ಹೆದರಿ ಬೆದರಿ ಸತ್ತಾರಪ್ಪ

ಹಾಸಗಿ ಇದ್ದಷ್ಟ ಕಾಲು ಚಾಚಬೇಕಪ್ಪ
ಭಯವ್ಯಾಕ ಸರಕಾರ ಜೊತಿಗೈತಪ್ಪ

ಫೋನ್ ಮಾಡಿ ಮೆಸೇಜ್ ಮಾಡಿ ಸಾಲ ಕೊಟ್ಟೋರೆ ಕೇಳ್ರೀ
ಸಾಲ ಮಾಡದೋರ್ನು ಕೂಡಾ ಕಾನೂನು ಕಾಯತ್ತಪ್ಪ
ಸಾಯೋ ಮಾತು ಬ್ಯಾಡಪ್ಪ
ಸುಗ್ರೀವಾಜ್ಞೆ ತಂದಾರಪ್ಪ
ಟಾರ್ಚರ್ ಕೊಟ್ಟೋರ್ನೆಲ್ಲಾ ಮೂಟೇನಾ ಕಟ್ತಾರಪ್ಪ
ಬದುಕಿ ಬಾಳಿ ಬಾಳೋಕ ಬಿಡ್ರೋ

ಮೈಕ್ರೋಫೈನಾನ್ಸ್ ಸಾಲ
ಮೀಟರ್ ಬಡ್ಡಿಗೆ ಸಾಲ
ಮಾಡಬಾರದೋ
ಸಾಲ ಮಾಡಿ ಕೊರಗಿ ಸೊರಗಿ ಸಾಯಬಾರದೋ

– ಮಂಜುನಾಥ ಸಜ್ಜನರ.

ಫೆಬ್ರವರಿ 14, ಪ್ರೇಮಿಗಳ ದಿನ (ವ್ಯಾಲೆಂಟೈನ್ ಡೇ) ನಿಮಿತ್ತ ವಿಶೇಷ ಲೇಖನ

ಪ್ರೀತಿ ಅಮರ, ನಿರಂತರ

ಪ್ರೇಮ ಅಂದ್ರೆ ಪ್ರಣಯದ ಪ್ರೀತಿ, ಕರುಣೆ ಮತ್ತು ಅನುಕಂಪ ತುಂಬಿದ ಸಂಬಂಧ. ಪ್ರೀತಿ ಭವಸಾಗರ ದಾಟಿಸುವ ಹಡಗಾದರೆ, ಪ್ರೇಮಿಗಳು ನಾವಿಕರಾಗಬೇಕಷ್ಟೆ. ಪ್ರೀತಿಯ ಹುಟ್ಟನ್ನು ಹುಡುಕಲು ಅದಕ್ಕೆ ಮೂಲವೂ ಇಲ್ಲ ಹೇಳಿಕೊಡೋದಕ್ಕೆ ಗುರುವೂ ಬೇಕಾಗಿಲ್ಲ. ನಿಷ್ಕಲ್ಮಶ ಮನಸ್ಸು, ನಿಷ್ಠೆ, ನಂಬಿಕೆ, ಪ್ರಾಮಾಣಿಕತೆಯಷ್ಟೆ ಪ್ರೀತಿಗೆ ಬೇಕಾಗಿರೋದು. ಪ್ರೇಮ ಮತ್ತು ವಿವಾಹ ಎರಡು ಒಂದೇ ನಾಣ್ಯದ ಎರಡು ಮುಖಗಳಾಗಿದ್ದು, ಪ್ರೀತಿಯ ಮುಂದಿನ ಹಂತವೇ ಮದುವೆ. ಪ್ರೇಮವೆಂಬುವುದು ಸಾಗರದಂತೆ. ಅಲ್ಲಿ ಈಜಿ ಗೆಲ್ಲಬೇಕು, ಸಂಸಾರದ ಸುಖ ಅನುಭವಿಸಬೇಕು. ಎಲ್ಲ ಕಷ್ಟಗಳ ನಡುವೆ ಒಬ್ಬರಿಗೊಬ್ಬರು ಆಸರೆಯಾಗಿ ನಿಂತು ಬದುಕಿ ತೋರಿಸಬೇಕು. ಅದಷ್ಟೆ ನಾವು ಪ್ರೀತಿ, ಪ್ರೇಮಕ್ಕೆ ನೀಡಬಹುದಾದ ದೊಡ್ಡ ಗೌರವ.

ಪ್ರೇಮಿಗಳ ದಿನವು ಪ್ರಣಯ ದಂಪತಿಗಳಿಗೆ ಮಾತ್ರವಲ್ಲ, ನಿಮ್ಮ ಸುತ್ತಲಿರುವ ಎಲ್ಲರಿಗೂ ಮೆಚ್ಚುಗೆ ಮತ್ತು ಪ್ರೀತಿಯನ್ನು ತೋರಿಸುವ ದಿನವಾಗಿದೆ. ಪ್ರೀತಿಯನ್ನು ಅದರ ಎಲ್ಲಾ ರೂಪಗಳಲ್ಲಿ ಆಚರಿಸುವ ಸಲುವಾಗಿ ವಿಶ್ವದಾದ್ಯಂತ ಪ್ರತಿವರ್ಷ ಫೆಬ್ರವರಿ 14ರಂದು ವ್ಯಾಲೆಂಟೈನ್ ದಿನವನ್ನು ಆಚರಿಸಲಾಗುತ್ತದೆ.

ಗಂಡು-ಹೆಣ್ಣಿನ ಪ್ರಾಕೃತಿಕ ಆಕರ್ಷಣೆಯಿಂದ ಕೂಡಿದ ಪ್ರೀತಿಯನ್ನು ಪ್ರೇಮವೆಂದೂ, ಸ್ವಾರ್ಥವಿಲ್ಲದ ತಾಯಿ-ಮಗುವಿನ ಸಂಬಂಧದ ರೀತಿಯ ಮಾನಸಿಕ ಬಂಧನವನ್ನು ಪ್ರೀತಿಯೆಂದು ಕರೆಯುತ್ತಾರೆ.

ರೋಮ್ ದೇಶದ 'ವ್ಯಾಲೆಂಟೈನ್' ಎಂಬ ಸಂತನಿಂದ ಆರಂಭವಾದದ್ದು ಈ 'ವ್ಯಾಲೈಂಟೈನ್ ಡೇ'. ಈತ ರೋಮ್ ದೇಶದಲ್ಲಿ ಪಾದ್ರಿಯಾಗಿದ್ದ. ಒಂದು ಕಥೆಯ ಪ್ರಕಾರ ಅಲ್ಲಿಯ ಯುದ್ಧ ಕೈದಿಗಳಿಗೆ ಪ್ರೇಮ ವಿವಾಹ ಮಾಡಿಸಿದ ಕೃತ್ಯಕ್ಕಾಗಿ ರೋಮನ್ ಸಾಮ್ರಾಜ್ಯ ಆತನಿಗೆ ಮರಣದಂಡನೆ ವಿಧಿಸುತ್ತದೆ. ಈತ ಸೆರೆಮನೆಯಲ್ಲಿದ್ದಾಗ ಅಲ್ಲಿಯ ಜೈಲರ್‌ನ ಮಗಳನ್ನೇ ಪ್ರೀತಿಸುತ್ತಾನೆ. ತಾನು ಸಾಯುವ ಹಿಂದಿನ ದಿನ ಆತ ತನ್ನ ಪ್ರೇಮಿಗೆ ಒಂದು ಪತ್ರ ಬರೆಯುತ್ತಾನೆ. 'ನಿನ್ನ ಪ್ರೀತಿಯ ವ್ಯಾಲೆಂಟೈನ್‌ನಿಂದ' ಎಂದು ಶುರುವಾಗುವ ಈ ಪ್ರೇಮ ಪತ್ರ ತನ್ನ ಪ್ರೇಮ ನಿವೇದನೆಯಿಂದ ಪ್ರಖ್ಯಾತವಾಗುತ್ತದೆ. ಆತ ಕೂಡ ಅಮರ ಪ್ರೇಮಿಯಾಗುತ್ತಾನೆ.

ಆತ ಮರಣದಂಡನೆಗೆ ಗುರಿಯಾದ ದಿನವನ್ನು (ಫೆಬ್ರವರಿ 14) ವ್ಯಾಲೆಂಟೈನ್ ಡೇ ಅಥವಾ ಪ್ರೇಮಿಗಳ ದಿನ ಎಂದು ಜಗತ್ತಿನಾದ್ಯಂತ ಆಚರಿಸುವ ಪರಿಪಾಠ ಆರಂಭವಾಗಿದ್ದು 15ನೇ ಶತಮಾನದಿಂದ. ಅಲ್ಲಿಂದ ಆ ದಿನದಂದು ಜಗತ್ತಿನಾದ್ಯಂತ ಯುವಕ-ಯುವತಿಯರು ತಮ್ಮ ಪ್ರೇಮಿಗಳಿಗೆ ಪ್ರೇಮ ನಿವೇದನೆ ಮಾಡುವುದು, ಪರಸ್ಪರರಿಗೆ ಹೂಗುಚ್ಛ ಮತ್ತು ಇತರ ಕಾಣಿಕೆಗಳನ್ನು ನೀಡುವ ಮತ್ತು ಶುಭಾಶಯ ಪತ್ರಗಳನ್ನು ಕಳಿಸುವ ಪರಿಪಾಠ ಪ್ರಾರಂಭವಾಯಿತು.

ಭಾರತಕ್ಕೆ ಈ ವ್ಯಾಲೆಂಟೈನ್ ಡೇ ಕಾಲಿರಿಸಿದ್ದು ತೀರ ಇತ್ತೀಚೆಗಷ್ಟೆ. ಮೊದಲು ಕ್ರೈಸ್ತ ಧರ್ಮೀಯರು ಪ್ರಾರಂಭಿಸಿದ ಈ ಆಚರಣೆಯಿಂದ ಆಕರ್ಷಿತರಾದ ಎಲ್ಲ ಧರ್ಮದ ಯುವಕ-ಯುವತಿಯರು ಮುಂದೆ ಇದನ್ನು 'ಪ್ರೇಮಿಗಳ ದಿನ'ವನ್ನಾಗಿ ಆಚರಿಸಲು ಪ್ರಾರಂಭಿಸಿದರು.

ಜೀವನವು ಪ್ರೀತಿಯಿಂದ ಆರಂಭವಾಗುತ್ತದೆ. ಪ್ರೀತಿ ಎನ್ನುವುದು ವ್ಯಕ್ತಿಯ ಜೀವನದಲ್ಲಿ ಒಂದು ಸಂಜೀವಿನಿ ಇದ್ದಂತೆ. ಬಹುತೇಕ ಮಂದಿ ಪ್ರೀತಿ ಎಂದರೆ ಪರಸ್ಪರ ಒಂದು ಜೋಡಿಗಳ ನಡುವೆ ಇರುವ ಸೆಳೆತ, ಪ್ರೇಮ ಎಂದು ತಪ್ಪು ಕಲ್ಪನೆಯನ್ನು ಹೊಂದಿದ್ದಾರೆ. ಪ್ರೀತಿ ಎನ್ನುವುದು ಎಲ್ಲಕ್ಕಿಂತ ಮಿಗಿಲಾದದ್ದು. ಪ್ರಕೃತಿ, ಉನ್ನತ ಶಕ್ತಿ, ಮರಗಳು, ಪಕ್ಷಿ, ಪ್ರಾಣಿ, ಮಕ್ಕಳು, ಹೆತ್ತವರು, ಸ್ನೇಹಿತರು ಸೇರಿದಂತೆ ಎಲ್ಲಾ ಜೀವ ಸಮೂಹಗಳ ನಡುವೆ ಇರುವ ಬಾಂಧವ್ಯವೇ ಪ್ರೀತಿ. ಪ್ರೀತಿಯ ಭಾವನೆಯ ಆಚರಣೆಯು ಹೆಚ್ಚು ಉತ್ಸಾಹ ಹಾಗೂ ಖುಷಿಯನ್ನು ನೀಡುತ್ತದೆ.

ಈ ಪ್ರೀತಿಯು ಉಳಿದಿರುವುದೇ ನಂಬಿಕೆ, ತಿಳುವಳಿಕೆ ಮತ್ತು ಕಾಳಜಿಯ ಮೇಲೆ ಎಂದು ಹೇಳಬಹುದು. ಇಬ್ಬರು ವ್ಯಕ್ತಿಗಳು ಪರಸ್ಪರರ ಬಗ್ಗೆ ಸಾಕಷ್ಟು ಕಾಳಜಿ ವಹಿಸುವಾಗ, ಈ ಭಾವನೆಯ ಪೋಷಿಸುತ್ತದೆ. ಪ್ರೀತಿಯು ಭಾವನಾತ್ಮಕ, ದೈಹಿಕ ಮತ್ತು ಆಧ್ಯಾತ್ಮಿಕ ಬಂಧಗಳನ್ನು ಒಳಗೊಂಡಿರುತ್ತದೆ. ಆದರೆ ನಾವು ಯಾವ ರೀತಿಯ ಪ್ರೀತಿಯ ಹುಡುಕಾಟದಲ್ಲಿ ಇದ್ದೇವೆ ಎಂದು ಅರ್ಥ ಮಾಡಿಕೊಂಡು ಅಂತಹ ಪ್ರೀತಿ ಬೆಳೆಸಿಕೊಳ್ಳುವುದು ಉತ್ತಮ. ಏನಂತೀರಿ..?

ಒಟ್ಟಾರೆಯಾಗಿ ಪ್ರೇಮವೆಂಬುದೊಂದು ಹೃದಯಾಂತರಾಳದಿಂದ ಹೊಮ್ಮುವ ನವಿರಾದ ಭಾವನೆ. ಅದು ಒತ್ತಾಯದ ನಿವೇದನೆ, ಪ್ರಪೋಸಲ್‌ಗಳಿಂದ ಹುಟ್ಟುವಂತಹುದಲ್ಲ. ಹುಟ್ಟಿದರೂ ಅದು ಪ್ರೇಮವಲ್ಲ. ಕೇವಲ ಅದು ವಯೋಸಹಜ ಆಕರ್ಷಣೆ ಮಾತ್ರ. ಆದ್ದರಿಂದ ಈ ಪ್ರೇಮಿಗಳ ದಿನ ಅದರ ನಿಜವಾದ ಅರ್ಥದಲ್ಲಿ ಆಚರಣೆಯಾದರೆ ಮಾತ್ರ ಸುಂದರ. ಇಲ್ಲದಿದ್ದರೆ ಅಪಾಯಕ್ಕೆ ದಾರಿ. ಹಾಗೆಯೇ ಅದು ಮುಂದುವರೆದರೆ ಅನಾಹುತಕ್ಕೆ ದಾರಿ ಎನ್ನುವುದನ್ನು ಯುವ ಜನಾಂಗ ಅರಿತಾಗ ಮಾತ್ರ ಪ್ರೇಮಿಗಳ ದಿನ ಅರ್ಥಪೂರ್ಣವಾಗಲು ಸಾಧ್ಯ. ನೆನಪುಗಳನ್ನು ಶಾಶ್ವತವಾಗಿಸುವ ಬಯಕೆಗಳು ಇದ್ದೇ ಇರುತ್ತವೆ. ಆದರೆ ಇವುಗಳೆಲ್ಲವೂ ಒಂದು ದಿನಕ್ಕೆ ಸೀಮಿತವಾಗದೆ ವರ್ಷವಿಡೀ ಶಾಶ್ವತವಾಗಿ ಉಳಿಸಿ ಬೆಳೆಸುವ ಕಾರ್ಯವಾಗಬೇಕಾಗಿದೆ.

– ಬಸವರಾಜ ಎಮ್. ಯರಗುಪ್ಪಿ.
ಬಿಆರ್‌ಪಿ ಶಿರಹಟ್ಟಿ-ಲಕ್ಷ್ಮೇಶ್ವರ.

ಸರಕಾರಿ ವಾಹನಗಳನ್ನು ಸ್ವಂತಕ್ಕೆ ಉಪಯೋಗಿಸದಿರಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಎಲ್ಲ ಇಲಾಖಾ ಅಧಿಕಾರಿಗಳು ಸರಕಾರ ತಮಗೆ ಕೊಡಮಾಡಿದ ಸರಕಾರಿ ವಾಹನಗಳನ್ನು ಕಚೇರಿ ಕೆಲಸಕ್ಕೆ ಮಾತ್ರ ಉಪಯೋಗಿಸಬೇಕು. ಹೊರತುಪಡಿಸಿ ಸ್ವಂತಕ್ಕೆ ಉಪಯೋಗಿಸಬಾರದು ಎಂದು ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಜರುಗಿದ ಸಾರ್ವಜನಿಕ ಕುಂದುಕೊರತೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರಕಾರಿ ವಾಹನವು ಕಡ್ಡಾಯವಾಗಿ ರಾತ್ರಿ ವೇಳೆಯಲ್ಲಿ ಕಚೇರಿಯಲ್ಲಿ ಇರಬೇಕು. ವ್ಯಾಪ್ತಿಯನ್ನು ಹೊರತುಪಡಿಸಿ ಬೇರೆ ಕಡೆಗೆ ಸರಕಾರಿ ವಾಹನವನ್ನು ತೆಗೆದುಕೊಂಡು ಹೋಗಬಾರದು. ಇಂದಿನ ಸಭೆಯಲ್ಲಿ 6 ಅರ್ಜಿಗಳು ಸ್ವೀಕೃತವಾಗಿದ್ದು, ಇದರಲ್ಲಿ 2 ಅರ್ಜಿಗಳನ್ನು ಸ್ಥಳದಲ್ಲಿಯೇ ಇತ್ಯರ್ಥಪಡಿಸಲಾಗಿದೆ. ಪ್ರೌಢಶಾಲೆಗಳ ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದಕ್ಕೆ ಮುಂದಾಗಬೇಕು. ವಸತಿ ನಿಲಯಗಳಲ್ಲಿ ವಾರ್ಡನ್‌ಗಳು ನಿಗದಿತ ಸಮಯಕ್ಕೆ ಸರಿಯಾಗಿ ಮೆನು ಪ್ರಕಾರ ಊಟ ಮತ್ತು ಉಪಹಾರ ವಿತರಿಸಲು ಸೂಚಿಸಲಾಗಿದೆ. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಸಮರ್ಪಕ ಆಹಾರ ವಿತರಣೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಶಿರಹಟ್ಟಿಯ ಪ.ಪಂ ವತಿಯಿಂದ ನಿರ್ಮಾಣ ಮಾಡಿದ ಮಾರಾಟ ಮಳಿಗೆಗಳ ಹರಾಜು ಪ್ರಕ್ರಿಯೆಯನ್ನು ತ್ವರಿತಗತಿಯಲ್ಲಿ ನಡೆಸಬೇಕೆಂದು ಮುಖ್ಯಾಧಿಕಾರಿಗೆ ಸೂಚಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ತಹಸೀಲ್ದಾರ ಅನಿಲ ಬಡಿಗೇರ, ಲೋಕಾಯುಕ್ತ ಇನ್ಸಪೆಕ್ಟರ್ ಮತ್ತು ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ವಕ್ಫ್ ಮಸೂದೆಯನ್ನು ಜೆಪಿಸಿಗೆ ಹಿಂತಿರುಗಿಸುವಂತೆ ಒತ್ತಾಯಿಸಿದ ಮಲ್ಲಿಕಾರ್ಜುನ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಕ್ಫ್ ಕುರಿತ ಜಂಟಿ ಸಂಸದೀಯ ಸಮಿತಿ ವರದಿಯನ್ನು 'ನಕಲಿ' ಎಂದು ಕರೆದ ಕಾಂಗ್ರೆಸ್ ರಾಜ್ಯಸಭಾ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, "ರಾಜ್ಯಸಭಾ ಅಧ್ಯಕ್ಷ ಜಗದೀಪ್ ಧಂಖರ್ ಅವರು ವರದಿಯನ್ನು ಜೆಪಿಸಿಗೆ ಹಿಂತಿರುಗಿಸುಬೇಕು" ಎಂದು ಒತ್ತಾಯಿಸಿದರು.

"ನಾವು ಅಂತಹ ನಕಲಿ ವರದಿಯನ್ನು ಎಂದಿಗೂ ಸ್ವೀಕರಿಸುವುದಿಲ್ಲ" ಎಂದು ಖರ್ಗೆ ಹೇಳಿದರು. ಜೆಪಿಸಿಯಲ್ಲಿ ವಿರೋಧ ಪಕ್ಷದ ಸದಸ್ಯರ ಭಿನ್ನಾಭಿಪ್ರಾಯದ ಟಿಪ್ಪಣಿಯನ್ನು ತೆಗೆದುಹಾಕಲಾಗಿದೆ ಎಂದು ಅವರು ಆರೋಪಿಸಿದರು. ಆರೋಪಗಳಿಗೆ ಆಡಳಿತ ಪಕ್ಷದ ಪೀಠದಿಂದ ಭಾರಿ ಆಕ್ಷೇಪಣೆ ವ್ಯಕ್ತವಾಯಿತು. ರಾಜ್ಯಸಭೆಯಲ್ಲಿ ಮಾತನಾಡಿದ ಖರ್ಗೆ, "ವರದಿಯನ್ನು ವಾಪಸ್ ಕಳುಹಿಸಬೇಕು, ಎಲ್ಲ ಭಿನ್ನಾಭಿಪ್ರಾಯದ ಅಭಿಪ್ರಾಯಗಳನ್ನು ಸೇರಿಸಿದ ನಂತರವೇ ಅದನ್ನು ಮರುಪರಿಚಯಿಸಬೇಕು" ಎಂದು ಒತ್ತಾಯಿಸಿದರು. "ವಕ್ಫ್ ಮಂಡಳಿಯ ಕುರಿತಾದ ಜೆಪಿಸಿ ವರದಿಯಲ್ಲಿ, ಅನೇಕ ಸದಸ್ಯರು ತಮ್ಮ ಭಿನ್ನಾಭಿಪ್ರಾಯದ ವರದಿಯನ್ನು ಹೊಂದಿದ್ದಾರೆ. ಆ ಟಿಪ್ಪಣಿಗಳನ್ನು ತೆಗೆದುಹಾಕಿ ನಮ್ಮ ಅಭಿಪ್ರಾಯಗಳನ್ನು ಬುಲ್ಡೋಜರ್ ಮಾಡುವುದು ಸರಿಯಲ್ಲ. ಇದು ಪ್ರಜಾಪ್ರಭುತ್ವ ವಿರೋಧಿ ಭಿನ್ನಾಭಿಪ್ರಾಯದ ವರದಿಗಳನ್ನು ಅಳಿಸಿದ ನಂತರ ಮಂಡಿಸಲಾದ ಯಾವುದೇ ವರದಿಯನ್ನು ನಾನು ಖಂಡಿಸುತ್ತೇನೆ.

ಅನುಭವ

ಯುವ ಜನತೆಯಲ್ಲಿ ಪ್ರೀತಿ ಪ್ರೇಮ ಎಂಬುವುದು ಒಂದು ಪುಸ್ತಕದ ಪರಿವಿಡಿವಿದ್ದಂತೆ, ಅರ್ಥವಾದರೆ ಇಡೀ ಪುಸ್ತಕವೇ ಓದಿದಂತೆ. ಅಂದರೆ, ಮನಸ್ಸು ಮನಸ್ಸನ್ನು ಚನ್ನಾಗಿ

ಸಂಘರ್ಷಪೀಡಿತ ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕುಕಿ ಮತ್ತು ಮೈಥೇಯಿ ಸಮುದಾಯಗಳ ಮಧ್ಯೆ ವರ್ಷಗಳಿಂದ ನಡೆಯುತ್ತಿರುವ ಸಂಘರ್ಷದಲ್ಲಿ ಸಿಲುಕಿರುವ ಮಣಿಪುರದಲ್ಲಿ ರಾಷ್ಟ್ರಪತಿ ಆಡಳಿತ ಗುರುವಾರದಿಂದ ಜಾರಿಯಾಗಿದೆ.

ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್ ಅವರು ಸ್ಥಾನಕ್ಕೆ ರಾಜೀನಾಮೆ ನೀಡಿದ ನಾಲ್ಕು ದಿನಗಳ ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಈ ಆದೇಶ ಮಾಡಿದ್ದಾರೆ. ಸದ್ಯ ಅಸ್ತಿತ್ವದಲ್ಲಿರುವ ಸರ್ಕಾರ ಮತ್ತು ವಿಧಾನಸಭೆಯನ್ನು ಅಮಾನತಿನಲ್ಲಿಡಲಾಗುವುದು. ಸಂವಿಧಾನದ ಪ್ರಕಾರ, ರಾಜ್ಯದಲ್ಲಿ ಆಡಳಿತ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ರಾಷ್ಟ್ರಪತಿಗಳು ಅಭಿಪ್ರಾಯಪಟ್ಟಿದ್ದಾಗಿ ಗೃಹ ಸಚಿವಾಲಯ ಹೊರಡಿಸಿರುವ ಅಧಿಸೂಚನೆಯಲ್ಲಿದೆ.

ರಾಜ್ಯದಲ್ಲಿ ರಾಜಕೀಯ ಅಸ್ಥಿರತೆ ಉಂಟಾಗಿದೆ. ಹೀಗಾಗಿ, ಸಂವಿಧಾನದ 356ನೇ ವಿಧಿಯಡಿ ದತ್ತವಾಗಿರುವ ಅಧಿಕಾರವನ್ನು ಬಳಸಿ, ಮಣಿಪುರದಲ್ಲಿ ರಾಷ್ಟ್ರಪತಿ ಆಡಳಿತ ಹೇರಲಾಗುತ್ತಿದೆ. ರಾಜ್ಯ ಸರ್ಕಾರ ನಿರ್ವಹಿಸಬೇಕಿದ್ದ ಎಲ್ಲಾ ಕಾರ್ಯ, ಅಧಿಕಾರವನ್ನು ಇಂದಿನಿಂದ ಆ ರಾಜ್ಯದ ರಾಜ್ಯಪಾಲರು ವಹಿಸಿಕೊಳ್ಳಲಿದ್ದಾರೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನ

ವಿದ್ಯಾರ್ಥಿಗಳು ಶಿಸ್ತಿನ ಜೀವನ ರೂಢಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಾನವನ ಜೀವನದಲ್ಲಿ ವಿದ್ಯಾರ್ಥಿ ಜೀವನ ಅತ್ಯಂತ ಮಹತ್ವದ್ದು. ಈ ಸಮಯದಲ್ಲಿ ನೀವು ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಂಡರೆ ನಿಮ್ಮ ಜೀವನ ಸುಂದರ ಮತ್ತು ಸುಖಮಯವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ಸಮಾಜದಲ್ಲಿ ಸತ್ಪಜೆಗಳಾಗಿ ಬಾಳಲು ವಿದ್ಯಾರ್ಥಿ ಜೀವನ ಪೂರಕವಾಗಿರುತ್ತದೆ. ಶಾಲಾ-ಕಾಲೇಜು ದಿನಗಳಲ್ಲಿ ಉತ್ತಮ ನಡತೆ ಹಾಗೂ ಶಿಸ್ತಿನ ಜೀವನವನ್ನು ಅಳವಡಿಸಿಕೊಂಡಿರುವ ಪ್ರತಿಯೊಬ್ಬ ವಿದ್ಯಾರ್ಥಿಯೂ ಭವಿಷ್ಯದ ಜೀವನದಲ್ಲಿ ಉತ್ತಮ ಗುರಿಯನ್ನು ಸಾಧಿಸುತ್ತಾನೆ ಎಂದು ಮಾಜಿ ಶಾಸಕ ಮಹಾಂತೇಶ ಕವಟಗಿಮಠ ಹೇಳಿದರು.

ಪಟ್ಟಣದ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಯಶಸ್ಸನ್ನು ಗಳಿಸಲು ವಿದ್ಯಾರ್ಥಿಗಳು ತಮ್ಮ ಶಾಲಾ-ಕಾಲೇಜು ಜೀವನದಲ್ಲಿ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಯಲ್ಲಿಯೂ ಸಕ್ರಿಯರಾಗಿರಬೇಕು.

ಮನುಷ್ಯನ ಬದುಕಿನಲ್ಲಿ ಅತ್ಯವಶ್ಯಕವಾಗಿರುವ ಶಿಕ್ಷಣ ಭವಿಷ್ಯದ ದೊಡ್ಡ ಸಾಧನೆಗೆ ಮೌನಕ್ರಾಂತಿಯ ಅಸ್ತ್ರವಿದ್ದಂತೆ. ಬೆಳಕನ್ನು ಇಷ್ಟಪಡುವವರು ದೀಪದ ಕಾಳಜಿ ಮಾಡಬೇಕು ಎಂದರು.

ಉಪನಿರ್ದೇಶಕ ಸಿದ್ದಲಿಂಗ ಬಂಡು ಮಾತನಾಡಿ, ಸ್ವಂತ ಶಕ್ತಿಯಿಂದ ಬದುಕು ರೂಪಿಸಿಕೊಳ್ಳಲು ಶಿಕ್ಷಣ ಅತ್ಯವಶ್ಯಕ. ಶಿಕ್ಷಕ ವೃತ್ತಿಯಲ್ಲಿ ಕಳೆದುಕೊಳ್ಳುವಂಥದ್ದು ಏನೂ ಇಲ್ಲ. ಬೋಧನೆ ಮಾಡಿದಷ್ಟೂ ಗಳಿಸಿಕೊಳ್ಳುವುದೇ ಹೆಚ್ಚು. ಶಿಕ್ಷಕರು ಮಕ್ಕಳಿಗೆ ಗುಣಾತ್ಮಕ ಸಂಸ್ಕಾರದ ಪಠ್ಯದೊಂದಿಗೆ ಸ್ಪರ್ಧಾತ್ಮಕ ವಿಷಯಾಧಾರಿತ ಶಿಕ್ಷಣ ನೀಡಿದಾಗ ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವನೆ ಮೂಡಲು ಸಾಧ್ಯ ಎಂದರು.

ಪ್ರಾಚಾರ್ಯ ಎಂ.ಸಿ. ಕಟ್ಟಿಮನಿ ಮಾತನಾಡಿ, ವಿದ್ಯಾರ್ಥಿಗಳು ಪರೀಕ್ಷೆಯನ್ನು ಮನೋಸ್ಥೈರ್ಯದಿಂದ ಎದುರಿಸಿ, ಹೆಚ್ಚಿನ ಅಂಕಗಳನ್ನು ಗಳಿಸಿಕೊಳ್ಳಬೇಕೆಂಬುದರ ಕುರಿತು ಹೇಳಿದರು. ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ನಮ್ಮ ಪರಿಸರ ಸ್ನೇಹ ಹೇಗಿರುತ್ತದೆಯೋ ಹಾಗೆ ನಾವಿರುತ್ತೇವೆ. ನಮ್ಮ ವ್ಯಕ್ತಿತ್ವಕ್ಕೆ ನಮ್ಮ ಗೆಳೆಯರ ಬಳಗವೂ ಕಾರಣವಾಗುತ್ತದೆ. ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಬೇಕೆನ್ನುವವರು ಉತ್ತಮ ಗೆಳೆಯರ ಸ್ನೇಹ ಮಾಡಬೇಕು ಎಂದು ಹೇಳಿದರು.

> ಪ್ರಾಚಾರ್ಯ ಬಸವರಾಜ ಮೊಳೆಕಿರಿ ಮಾತನಾಡಿ, ಈ ಸಂಸ್ಥೆಯನ್ನು ಕಂಡು ಆನಂದವಾಗಿದೆ. ಇಲ್ಲಿನ ಸಂಸ್ಕಾರ ಮನಸ್ಸಿಗೆ ತುಂಬಾ ಸಂತೋಷ ನೀಡಿದೆ. ಜೀವನದ ಅತ್ಯಂತ ಮಹತ್ವದ ಹಂತದಲ್ಲಿರುವ ನೀವು ನಿಮ್ಮ ಪರೀಕ್ಷೆ ಮತ್ತು ಅಭ್ಯಾಸದ ಬಗ್ಗೆ ಗಮನವನ್ನು ಕೇಂದ್ರೀಕರಿಸಿರಿ. ಇಂದಿನಿಂದಲೇ ಸಾಧನೆ ಮಾಡಿದರೆ ಖಂಡಿತ ಉತ್ತಮ ಫಲಿತಾಂಶ ಪಡೆಯುವಿರಿ ಎಂದರು.

ಸಮಾರಂಭದಲ್ಲಿ ಅಧ್ಯಕ್ಷ ಎಂ.ಜಿ. ಸೋಮನಕಟ್ಟಿ, ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಶೈಕ್ಷಣಿಕ ಮೇಲ್ವಿಚಾರಕ ಬಿ.ಎಸ್. ಗೌಡರ, ಸದಸ್ಯರಾದ ಬಸವರಾಜ ಕಳಕಣ್ಣವರ, ಎಂ.ಪಿ. ಪಾಟೀಲ, ವಿ.ಎಸ್. ಧೋತ್ರದ, ಪ್ರಾಚಾರ್ಯ ವೈ.ಸಿ. ಪಾಟೀಲ ಸೇರಿದಂತೆ ಸಿಬ್ಬಂದಿಯವರಿದ್ದರು.

ಉತ್ತಮ ಸಮಾಜ ನಿರ್ಮಾಣಕ್ಕೆ ಶಿಕ್ಷಣವೇ ಬುನಾದಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಿಕ್ಷಣದಿಂದ ಸಮಾಜದ ಆಗುಹೋಗುಗಳನ್ನು ತಿಳಿದುಕೊಳ್ಳುವುದರೊಂದಿಗೆ ಉತ್ತಮ ಸಮಾಜ ನಿರ್ಮಾಣಕ್ಕೆ ಭದ್ರ ಬುನಾದಿಯಾಗಿದೆ ಎಂದು ಗದಗ ಡೈಟ್ ಉಪನ್ಯಾಸಕಿ ಸುಧಾ ಬನ್ನಿಕಲ್ಲ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದ್ದು, ಸರಕಾರಿ ಶಾಲಾ ಮಕ್ಕಳು ಎಲ್ಲಾ ಹಂತದಲ್ಲೂ ಮೊದಲ ಸ್ಥಾನದಲ್ಲಿರುವುದು ಹೆಮ್ಮೆಯ ವಿಚಾರ. ಸರಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಕರನ್ನು

ಹೊಂದಿದ್ದು, ಮಕ್ಕಳು ಪೌಷ್ಠಿಕವಾಗಿರಲು ಗುಣಮಟ್ಟದ ಬಿಸಿ ಊಟ, ಸಮವಸ್ತ್ರ, ಶೂ-ಸಾಕ್ಸ್, ಮೊಟ್ಟೆ, ಹಾಲು, ಚಿಕ್ಕಿ-ಬಾಳೆಹಣ್ಣು ನೀಡಿ ಮಕ್ಕಳ ಆರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಪಾಲಕರು ಸರಕಾರಿ ಶಾಲೆಗಳ ಮಹತ್ವ ಅರಿತು ಪ್ರತಿಯೊಬ್ಬರೂ ಪ್ರಯೋಜನಗಳನ್ನು ಪಡೆದುಕೊಳ್ಳಬೇಕು ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಿಕ್ಷಕರಾದ ಟಿ.ವೀಣಾ, ವಿ.ಎಂ. ಕಂಠಿ, ಎಚ್.ಆರ್. ಭಜಂತ್ರಿ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ಕೆ.ಎಂ. ಹೆರಕಲ್, ಮಂಜುನಾಥ ಕಲ್ಯಾಣಮಠ, ಎಂ.ಎಂ. ಕೊಪ್ಪಳ, ಪವಿತ್ರಾ ಮಟ್ಟಿ, ನಂದಾ ಮಟ್ಟಿ, ಜ್ಯೋತಿ ಜಾಧವ, ರೇಣುಕಾ ಪರ್ವತಗೌಡ್ರ ಹಾಗೂ ಅಡುಗೆ ಸಿಬ್ಬಂದಿಗಳು ಇದ್ದರು.

ವಾತ್ಸಲ್ಯ ಮನೆ ಹಸ್ತಾಂತರ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ನೀಲಗುಂದ ಗ್ರಾಮದ ಅಂಬೇಡ್ಕರ್ ನಗರದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಕಾರ್ಯಕ್ರಮದಡಿಯಲ್ಲಿ ಶಿವಮ್ಮಾ ಕಾಳೆ ಅವರಿಗೆ ಶಿಕ್ಷಕರಾದ ಎಸ್.ಎಂ. ನವಲಿ ಮನೆಯನ್ನು ಹಸ್ತಾಂತರ ಮಾಡಿದರು.

ಯೋಜನೆಯ ನಿರ್ದೇಶಕ ಎ.ಯೋಗೇಶ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿಯು ಸಮಾಜದಲ್ಲಿ ದುರ್ಬಲರು, ಆಶಕ್ತರು, ನಿರ್ಗತಿಕರನ್ನು ಗುರುತಿಸಿ ವಾತ್ಸಲ್ಯ ಯೋಜನೆಯಡಿ ಮನೆಗಳನ್ನು ಕಟ್ಟಿಸಿಕೊಡುವುದರ ಜೊತೆಯಲ್ಲಿ ಮಾಶಾಸನ ಹಾಗೂ ಅಗತ್ಯ ಸೌಲಭ್ಯಗಳೊಂದಿಗೆ ಮಹಿಳೆಯರು

ಸ್ವಾವಲಂಬಿಯಾಗಿ ಬದುಕಲು ನೆರವು ನೀಡುತ್ತಿದೆ ಎಂದರು.

ಗದಗ ತಾಲೂಕಾ ಯೋಜನಾ ನಿರ್ದೇಶಕ ಸುರೇಂದ್ರ ನಾಯಕ, ಗ್ರಾಪಂ ಅಧ್ಯಕ್ಷೆ ಶಶಿಕಲಾ ಪೂಜಾರ, ಸದಸ್ಯರಾದ ವಿನಯ ಬಂಗಾರಿ, ಚಂದ್ರಶೇಖರ ಜಕ್ಕಮ್ಮನವರ, ಲಕ್ಷ್ಮಿ ನಾಯ್ಕರ್, ಕುಬೆರೆಡ್ಡಿ ಬಂಗಾರಿ, ದೊಡ್ಡಹನಮಪ್ಪ ಕಾಳೆ, ಎಸ್.ವಿ. ಅಮೋಘಿಮಠ, ಬಸವರಾಜ ಜಕ್ಕಮ್ಮನವರ, ರವಿ ವಗ್ಗನವರ ಇದ್ದರು.

ಉಚಿತ ಮೋತಿ ಬಿಂದು ಶಸ್ತ್ರ ಚಿಕಿತ್ಸಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗದಲ್ಲಿ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರದಿಂದ, ಶ್ರೀ ಎಚ್. ಕೆ. ಪಾಟೀಲ ಸೇವಾ ತಂಡದ ಸಹಾಯದಿಂದ ಫೆ.12ರಂದು ಒಟ್ಟು 14 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ (ಮೋತಿ ಬಿಂದು) ಶಸ್ತ್ರ ಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ಮಾಡಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಇವರು ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು. ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ಖ್ಯಾತ ವೈದ್ಯರು ನೆರವೇರಿಸಿದರು. ಇದಕ್ಕೂ ಮೊದಲು ಫಲಾನುಭವಿಗಳಿಗೆ ಉಚಿತವಾಗಿ ಬಿಪಿ, ಶುಗರ್, ರಕ್ತ ತಪಾಸಣೆ ಮಾಡಲಾಯಿತು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿ ಶಿಬಿರದ ಯಶಸ್ಸಿಗೆ ಶ್ರಮಿಸಿದರು.

ದತ್ತಾತ್ರೇಯನಿಗೆ ಶ್ರದ್ಧಾ ಭಕ್ತಿಯ ಕ್ಷೀರಾಭಿಷೇಕ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತದಲ್ಲಿ ಗೋವುಗಳನ್ನು ದೇವತೆಯೆಂದು ಪೂಜಿಸುತ್ತಾರೆ. ಆಕಳಿನ ಹೊಟ್ಟೆಯಲ್ಲಿ ಉತ್ಪಾದನೆಯಾಗುವ ಕ್ಷೀರವು ಅಮೃತಕ್ಕೆ ಸಮಾನವಾಗಿದೆ. ಅಬಾಲವೃದ್ಧರಾಗಿ ಎಲ್ಲರಿಗೂ ಇದು ಅತ್ಯಂತ ಪ್ರಿಯವಾಗಿದ್ದು, ಭಗವಂತನಿಗೂ ಸಹ ಆಕಳಿನ ಕ್ಷೀರ ಅತ್ಯಂತ ಪ್ರಿಯವಾಗಿದೆ ಎಂದು ದತ್ತ ದೇವಸ್ಥಾನದ ಅರ್ಚಕ ಶ್ರೀವಲ್ಲಭಶಾಸ್ತ್ರೀ ಸದರಜೋಷಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ 115ನೇ ಗುರುಪ್ರತಿಪದೆ ಉತ್ಸವದ ನಿಮಿತ್ತ ಶ್ರೀ ಗುರು ದತ್ತಾತ್ರೇಯನಿಗೆ ನಡೆದ ಕ್ಷೀರಾಭಿಷೇಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪರಶಿವನು ಅಭಿಷೇಕ ಪ್ರಿಯ.

ಕ್ಷೀರಾಭಿಷೇಕದಿಂದ ಭಗವಂತ ಸಂಪ್ರೀತನಾಗುತ್ತಾನೆ. ಭಕ್ತರ ಇಷ್ಟಾರ್ಥಗಳನ್ನು ಈಡೇರುವಂತೆ ಹರಸುತ್ತಾನೆ. ಕ್ಷೀರವನ್ನು ದೇವರಿಗೆ ಅರ್ಪಿಸುವಾಗ ಮನಸ್ಸು ಮೂರ್ತಿಯನ್ನು ನೋಡುತ್ತ ಕೇಂದ್ರೀಕರಿಕೊಂಡು ಒಳ್ಳೆಯ ಯೋಚನೆಗಳಷ್ಟೇ ಮನ ತುಂಬಿಕೊಂಡು ಸನ್ಮಾರ್ಗದಲ್ಲಿ ನಡೆಯುವಂತೆ ಮಾಡುತ್ತದೆ. ಅರುಣ ಜಿ.ಕುಲಕರ್ಣಿ(ಕುರಗಡ್ಡಿ) ಅವರು ಸತತ 35 ವರ್ಷಗಳಿಂದ ಶ್ರೀ ದತ್ತಾತ್ರೇಯರಿಗೆ ಕ್ಷೀರಾಭಿಷೇಕ ಸೇವೆಯನ್ನು ಅರ್ಪಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ವೇ.ಮೂ. ವಿಶ್ವನಾಥಭಟ್ಟ ವೈದ್ಯ, ಡಾ. ಎನ್.ಎಲ್. ಗ್ರಾಮಪುರೋಹಿತ, ಅರುಣ ಕುಲಕರ್ಣಿ, ಎಸ್.ಎಚ್. ಕುಲಕರ್ಣಿ, ಎ.ಜಿ. ಕುಲಕರ್ಣಿ, ಡಾ. ಕೃಷ್ಣಾ ಕಾಳೆ, ಅಜಿತ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಹರೀಶ ಕುಲಕರ್ಣಿ, ಆನಂದ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ನಾಗರಾಜ ನಾಡಿಗೇರ, ವಿ.ಆರ್. ಗ್ರಾಮಪುರೋಹಿತ, ಸೋಮನಾಥ ಗ್ರಾಮಪುರೋಹಿತ, ಶ್ರೀಧರ ಗ್ರಾಮಪುರೋಹಿತ, ಕಿರಣ ಕಾಳೆ, ಮುಕುಂದ ಸೂರ್ಯಭಟ್ಟನವರ, ಸುಹಾಸ ಕುಲಕರ್ಣಿ, ರಾಮಕೃಷ್ಣ ಸದರಜೋಶಿ, ಸುಮಂತ ಗ್ರಾಮಪುರೋಹಿತ ಸೇರಿದಂತೆ ಇತರರಿದ್ದರು.

ಮಹಾಕುಂಭಮೇಳ: ತ್ರಿವೇಣಿ ಸಂಗಮದಲ್ಲಿ ಮಿಂದೆದ್ದ ಬಿವೈ ವಿಜಯೇಂದ್ರ!

■ ವಿಜಯಸಾಕ್ಷಿ ಸುದ್ದಿ, ಪ್ರಯಾಗ್ ರಾಜ್

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಹಾ ಕುಂಭಮೇಳದಲ್ಲಿ ಭಾಗಿಯಾಗಿ, ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡಿದರು.



ಪುಣ್ಯಸ್ನಾನದ ಬಳಿಕ ಮಾತನಾಡಿದ ಬಿವೈ ವಿಜಯೇಂದ್ರ, ಈ ಮಹಾಕುಂಭಮೇಳ ಇಡೀ ವಿಶ್ವದ ಧರ್ಮಾತೀತ ಆಸ್ತಿಕರನ್ನು ಸೂಜಿಗಲ್ಲಿನಂತೆ ಬರಸೆಳೆದು ಜಾಗತಿಕ ಇತಿಹಾಸ ಬರೆಯುತ್ತಿದೆ. 144 ವರ್ಷಗಳ ನಂತರ ನಡೆಯುತ್ತಿರುವ ಪ್ರಯಾಗ್‌ರಾಜ್‌ನ ಕುಂಭಮೇಳದ ತ್ರಿವೇಣಿ ಸಂಗಮದಲ್ಲಿ ಮಾಡಿದ ಪುಣ್ಯಸ್ನಾನ ಪುನೀತ ಭಾವ ಮೂಡಿಸಿದೆ ಎಂದು ತಿಳಿಸಿದರು.

ಜಾಗತಿಕ ಶಾಂತಿಗಾಗಿ, ದೇಶದ ಕಲ್ಯಾಣಕ್ಕಾಗಿ, ಕರುನಾಡ ಜನರ ಒಳಿತಿಗಾಗಿ ಪ್ರಾರ್ಥಿಸಿದೆ. ಈ ಕುಂಭಮೇಳದ ಕೊನೆಯ ದಿನದವರೆಗೂ ಅಂದರೆ ಫೆಬ್ರವರಿ 28ರಂದು ಹರಿದು ಬರುವ ಭಕ್ತ ಸಾಗರಕ್ಕೆ ಪುಣ್ಯ ಲಬಿಸಲಿ, ಯಾವುದೇ ಅವಘಡಗಳು ಸಂಭವಿಸದಿರಲೆಂದು ಭಗವಂತ ನಲ್ಲಿ ಪ್ರಾರ್ಥಿಸಿದ್ದೇನೆ ಹಾಗೂ ಪರಮಪೂಜ್ಯ ಋಷಿ ಮುನಿಗಳ ಆಶೀರ್ವಾದ ನವಚೈತನ್ಯ ಮೂಡಿಸಿದೆ ಎಂದು ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಕ.ವಿ.ಮಂ ನಿವೃತ್ತ ನೌಕರರ ಮಾಸಿಕ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕ.ವಿ.ಮಂ. ನಿವೃತ್ತ ನೌಕರರ ಮಾಸಿಕ ಸಭೆಯು ಜಿ.ಎಂ. ಯಾನಮಶೆಟ್ಟಿ ಅವರ ಅಧ್ಯಕ್ಷತೆಯಲ್ಲಿ ಜರುಗಿ-ತು. ಮುಖ್ಯ ಅತಿಥಿಗಳಾಗಿ ನಿವೃತ್ತ ಆರೋಗ್ಯಾಧಿಕಾರಿ ಆರ್.ಪ್ಹಿ. ಕುಪ್ಪಸ್ತ ಆಗಮಿಸಿ ಹಿರಿಯ ನಾಗರಿಕರ ಆರೋಗ್ಯ ಸೂತ್ರಗಳಾದ ಮಿತವಾದ ಆಹಾರ, ವ್ಯಾಯಾಮ, ಧ್ಯಾನ, ನಡಿಗೆ ಹಾಗೂ ಹೊಂದಾಣಿಕೆಗಳ ಬಗ್ಗೆ ಮನ ಮುಟ್ಟುವಂತೆ ವಿವರಿಸಿದರು.

ಅನ್ನಪೂರ್ಣ ರಾಠೋಡ ಹಾಗೂ ಫಕ್ಕೀರಪ್ಪ ಉಪ್ಪಿನ ತಮ್ಮ ಹುಟ್ಟುಹಬ್ಬದ ಪ್ರಯುಕ್ತ ದಾಸೋಹ ಸೇವೆಯನ್ನು ವಹಿಸಿಕೊಂಡಿದ್ದರು. ವಾಯ್.ಬಿ. ಭಾನಾಪೂರ ಅವರು ಶರಾವತಿ ಪತ್ತಿನ ಸಹಕಾರಿ ಸಂಘ ಹಾಗೂ ಸಮುದಾಯ ಭವನದ ಕಟ್ಟಡದ ಬಗ್ಗೆ ಮಾಹಿತಿ ನೀಡಿದರು. ಕರ್ನಾಟಕ

ಬ್ಯಾಂಕ್‌ನ ವಿಜಯ ನೆಟಗಲ್ಲ ತಮ್ಮ ಬ್ಯಾಂಕಿನ ಆರೋಗ್ಯ ವಿಮೆ ಹಾಗೂ ಇತರೆ ಸೌಲಭ್ಯಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು.

ಎಸ್.ಬಿ. ಓಲಿ, ಎಸ್. ವಾಯ್. ಹುಂಬಿ, ಎ.ಎನ್. ಬಸ್ತಿ, ಬಿ.ಎಂ. ಬಾಣಿ, ಪ್ಹಿ.ಪಿ. ಸವಡಿ, ಎನ್.ಪ್ಹಿ. ಹೇಮಗಿರಿಮಠ, ಎಸ್. ಆಯ್. ಸರೂರ, ಜಿ.ಆರ್. ಅಗಸಿಯವರ, ಎಸ್.ಎಸ್. ಸ್ಥಾವರಮಠ, ಎಸ್.ಆರ್. ಕಲಾಲ, ಜೆ.ಬಿ. ಕೊಪ್ಪಳ, ಎಚ್.ಬಿ. ಬಡಿಗೇರ, ಸಿ.ಪ್ಹಿ. ಬೋಳಣ್ಣವರ, ಪ್ಹಿ.ಎಫ್. ಹೊಸಮನಿ, ಎಚ್. ಎಂ. ಕಂಚಗಾರ, ಎಂ.ಜಿ. ಫತ್ತೇನವರ, ನಾಗನಗೌಡ ಚಿಕ್ಕಣ್ಣವರ, ಎಸ್.ಎಸ್. ಕೊಣ್ಣೂರ, ಜನ್ನುಸಾಬ ಉಮಚಗಿ, ಎಸ್.ಡಿ. ಚಿಕ್ಕನಗೌಡರ, ಜೆ.ಜಿ. ಪಠಾಣ, ಬಿ.ಎಂ. ಕಂಬಿ, ಎಂ.ಎಂ. ನಾಗಸಮುದ್ರ ಮುಂತಾದವರು ಉಪಸ್ಥಿತರಿ

ಸರ್ವಜ್ಞ ಜಯಂತಿ: ನಾಳೆ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವೂ ಫೆ. 20 ರಂದು ಆಚರಿಸಲಾಗುವ ಸಂತಕವಿ ಸರ್ವಜ್ಞ ಜಯಂತಿ ನಿಮಿತ್ತ ದಿ:15.02.2025 ರಂದು ಮಧ್ಯಾಹ್ನ:12.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ತಾವು ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

ಛತ್ರಪತಿ ಶಿವಾಜಿ ಜಯಂತಿ ಹಿನ್ನೆಲೆ: ಪೂರ್ವಭಾವಿ ಸಭೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವೂ ಫೆ.19 ರಂದು ಆಚರಿಸಲಾಗುವ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ನಿಮಿತ್ತ ದಿ:15.02.2025 ರಂದು ಬೆಳಿಗ್ಗೆ:11.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ತಾವು ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ಧಾಷ್ಟಾವಧಿ ಮುಷ್ಕರ । ವಿವಿಧ ಸಂಘಟನೆಗಳ ಸಾಥ್

ನೈತಿಕ ಧೈರ್ಯ ತುಂಬುವ ನಿಟ್ಟಿನಲ್ಲಿ ಬೆಂಬಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯಾದ್ಯಂತ ನಡೆಯುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ಧಾಷ್ಟಾವಧಿ ಮುಷ್ಕರಕ್ಕೆ ಬೆಂಬಲಾರ್ಥವಾಗಿ ಲಕ್ಷ್ಮೇಶ್ವರದ ತಹಸೀಲ್ದಾರ ಕಚೇರಿ ಎದುರು ಗ್ರಾಮ ಆಡಳಿತ ಅಧಿಕಾರಿಗಳು ನಡೆಸುತ್ತಿರುವ 4ನೇ ದಿನ ಮುಷ್ಕರಕ್ಕೆ ಗುರುವಾರ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಬೆಂಬಲ ವ್ಯಕ್ತಪಡಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಜಿ.ಡಿ. ಹವಳದ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಿ.ಎಸ್. ಹರ್ಲಾಪೂರ ಮಾತನಾಡಿ, ಗ್ರಾಮ ಆಡಳಿತ ಅಧಿಕಾರಿಗಳು ಈ ಹಿಂದೆ ಕೈಗೊಂಡ ಮುಷ್ಕರದ ಯಾವುದೇ ಬೇಡಿಕೆಗಳನ್ನು ರಾಜ್ಯ ಸರಕಾರ ಈಡೇರಿಸದ ಕಾರಣ ರಾಜ್ಯಾದ್ಯಂತ ಮತ್ತೆ ಗ್ರಾಮ ಆಡಳಿತ ಅಧಿಕಾರಿಗಳು ಮುಷ್ಕರಕ್ಕೆ ಇಳಿದಿದ್ದಾರೆ. ಇದರಿಂದ ಸಾರ್ವಜನಿಕರ ಕೆಲಸಗಳಿಗೆ ಸಮಸ್ಯೆ ಉಂಟಾಗುತ್ತದೆ ಎಂದರು.

ನಂತರ ವಿವಿಧ ಸಂಘಗಳು ಮುಷ್ಕರಕ್ಕೆ ಬೆಂಬಲ ಸೂಚಿಸಿ ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ಸಂಘ ಪ್ರಧಾನ ಕಾರ್ಯದರ್ಶಿ ಎಂ.ಎ. ನದಾಫ್, ಮಂಜುನಾಥ ವಾರದ ಹಾಗೂ ಪದಾಧಿಕಾರಿಗಳು, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಎಫ್.ಎಸ್. ತಳವಾರ, ಆರ್.ಡಿ.ಪಿ.ಆರ್ ನೌಕರರ ಸಂಘದ ಅಧ್ಯಕ್ಷ ಕೃಷ್ಣಪ್ಪ ಧರ್ಮರ, ವಿಕಲಚೇತನ ನೌಕರರ ಸಂಘದ ಅಧ್ಯಕ್ಷ ಬಿ.ಎಂ. ಕುಂಬಾರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಮಂಜುನಾಥ ಚೌಹಾಣ, ಎಂ.ಬಿ. ಹೂಗಾರ, ಎ.ಎಂ. ಅಕ್ಕಿ, ಶ್ರೀಕಾಂತ ಬಾಲೆಹೊಸೂರ, ಮಂಜುನಾಥ ಕೊಕ್ಕರಗುಂದಿ ಸೇರಿದಂತೆ ಎಲ್ಲಾ ನಿರ್ದೇಶಕರು, ಪದಾಧಿಕಾರಿಗಳು ಹಾಗೂ ಎಲ್ಲಾ ಇಲಾಖೆಯ ನೌಕರ ಬಾಂಧವರು ಹಾಜರಿದ್ದು ಸಂಪೂರ್ಣ ಬೆಂಬಲ ಸೂಚಿಸಿದರು.

ಮುಷ್ಕರ ನಿರತ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲೂಕಾಧ್ಯಕ್ಷ ಡಿ.ಎಸ್. ಕುಲಕರ್ಣಿ, ಉಪಾಧ್ಯಕ್ಷ ಎಚ್.ಕೃಷ್ಣಮೂರ್ತಿ, ಬಿ.ವೈ. ಮಲ್ಲಿಗವಾಡ, ಎನ್.ಬಿ. ಕನೋಜ, ಸುಬೇದಖಾನ ಪಠಾಣ, ಡಿ.ಎಲ್. ವಿಭೂತಿ, ಆರ್.ಎನ್. ನೆಗಳೂರ, ಫಾತಿಮಾ ಪತ್ತೆಖಾನ, ಸೌಮ್ಯ ಕೆ, ಕೆ.ಎನ್. ಪಾಟೀಲ ಮುಂತಾದವರಿದ್ದರು.

ಗ್ರಾಮ ಆಡಳಿತ ಅಧಿಕಾರಿಗಳಿಗೆ ಮೂಲಭೂತ ಸೌಲಭ್ಯ ಬೇಕು. ಅಧಿಕಾರಿಗಳಿಗೆ ಸುಸಜ್ಜಿತವಾದ ಕಚೇರಿ, ಗುಣಮಟ್ಟದ ಟೇಬಲ್-ಕುರ್ಚಿ ಅಲ್ಮೆರಾ, ಮೊಬೈಲ್ ಸಿಯುಜಿ ಸಿಮ್ ಮತ್ತು ಡೇಟಾ, ಲ್ಯಾಪ್‌ಟಾಪ್, ಪ್ರಿಂಟರ್-ಸ್ಕ್ಯಾನರ್ ಒದಗಿಸುವುದರೊಂದಿಗೆ ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಬೇಕು ಎಂಬಿತ್ಯಾದಿ ಬೇಡಿಕೆಗಳ ಬಗ್ಗೆ ಸರಕಾರ ಕೂಡಲೇ ಕ್ರಮ ಕೈಗೊಳ್ಳಬೇಕು. ಈ ಹೋರಾಟಕ್ಕೆ ನೈತಿಕವಾಗಿ ಧೈರ್ಯ ತುಂಬುವ ನಿಟ್ಟಿನಲ್ಲಿ ಮುಷ್ಕರಕ್ಕೆ ಬೆಂಬಲ ಸೂಚಿಸಿದ್ದೇವೆ ಎಂದು ಜಿ.ಡಿ. ಹವಳದ ಹೇಳಿದರು.

ಬಜೆಟ್‌ನಲ್ಲಿ ಕೊಳಗೇರಿಗಳ ಅಭಿವೃದ್ಧಿಗೆ 5 ಸಾವಿರ ಕೋಟಿ ರೂ ಅನುದಾನ ಮೀಸಲಿಡಲು ಆಗ್ರಹಿಸಿ ಮನವಿ

ಜನಸಂಖ್ಯೆ ಅನುಗುಣವಾಗಿ ಅನುದಾನ ಮೀಸಲಿಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಬಜೆಟ್ ಪೂರ್ವಭಾವಿಯಾಗಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯಿಂದ ವಿಕಾಸ ಸೌಧದಲ್ಲಿರುವ ವಸತಿ ಇಲಾಖೆ ಪ್ರಧಾನ ಕಾರ್ಯದರ್ಶಿ ನವೀನ್‌ರಾಜ್ ಸಿಂಗ್ ಹಾಗೂ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಪ್ರಸಾದ ಅಬ್ಬಯ್ಯ ಅವರಿಗೆ ಮನವಿ ನೀಡಿ, ಈ ಬಾರಿ ಸರ್ಕಾರದ ಬಜೇಟ್‌ನಲ್ಲಿ ರಾಜ್ಯದ ಕೊಳಗೇರಿಗ ಅಭಿವೃದ್ಧಿಗಾಗಿ 5 ಸಾವಿರ ಕೋಟಿ ರೂ ಅನುದಾನ ಮೀಸಲಿಡಬೇಕೆಂದು ಆಗ್ರಹಿಸಿದರು.

ರಾಜ್ಯದ ಸ್ಲಂ ನಿವಾಸಿಗಳ ಜನಸಂಖ್ಯೆ ಅನುಗುಣವಾಗಿ 5 ಸಾವಿರ ಕೋಟಿ ರೂ ಅನುದಾನವನ್ನು ಕೊಳಗೇರಿಗಳ ಅಭಿವೃದ್ಧಿ ಮತ್ತು ವಸತಿಗಾಗಿ ಮೀಸಲಿಡಬೇಕು. ರಾಜ್ಯದ 2816 ಕೊಳಗೇರಿ ಪ್ರದೇಶಗಳ ಮೂಲ ಸೌಕರ್ಯಗಳಿಗಾಗಿ 4 ಸಾವಿರ ಕೋಟಿ ಅನುದಾನ ಮೀಸಲಿಟ್ಟು ಸ್ಲಂ ನಿವಾಸಿಗಳ ವಸತಿ, ಶುದ್ಧ ಕುಡಿಯುವ ನೀರು, ರಸ್ತೆ, ಚರಂಡಿ, ಒಳಚರಂಡಿ, ಶೌಚಾಯಲಗಳು, ಸಮುದಾಯ ಭವನಗಳು, ಶಾಲಾ ಕಟ್ಟಡ ಒಳಗೊಂಡು ಸೌಲಭ್ಯಗಳನ್ನು ಒದಗಿಸಲು ಒನ್ ಟೈಮ್ ಗ್ರ್ಯಾಂಟನ್ನು ಘೋಷಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಎ.ನರಸಿಂಹಮೂರ್ತಿ, ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಹಾಗೂ ರಾಜ್ಯ ಸಂಚಾಲಕ ಇಮ್ತಿಯಾಜ ಆರ್.ಮಾನ್ವಿ, ರಾಜ್ಯ ಸಂಘಟನಾ ಸಂಚಾಲಕ ಜನಾರ್ಧನ ಹಳ್ಳಿಬೆಂಚಿ, ರಾಜ್ಯ ಮಹಿಳಾ ಸಂಚಾಲಕಿ ಚಂದ್ರಮ್ಮ, ರೇಣುಕಾ ಸರಡಗಿ, ವೆಂಕಮ್ಮ, ಮಂಜುಬಾಯಿ, ರೇಣುಕಾ ಯಲ್ಲಮ್ಮ, ಅರುಣ ಟಿ, ಹನುಮಂತ, ಸುಧಾ ಹಾಗೂ ರಾಜ್ಯದ ವಿವಿಧ ಜಿಲ್ಲೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಾಮಾಜಿಕ ಅಸಮಾನತೆಯ ಭಾಗವಾದ ಸ್ಲಂ ಜನರ ಆರ್ಥಿಕ ಅಭಿವೃದ್ಧಿಗೆ ನಗರ ಉದ್ಯೋಗ ಖಾತ್ರಿ ಯೋಜನೆ ಜಾರಿಗೆ ತರಬೇಕು. ಜನವರಿ 16-2025ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ತೀರ್ಮಾನದಂತೆ ರಾಜ್ಯದಲ್ಲಿ ಬಾಕಿ ಉಳಿದಿರುವ 61,894 ಮನೆಗಳ ನಿರ್ಮಾಣ ಪೂರ್ಣಗೊಳಿಸಲು ಹಣವನ್ನು ಬಿಡುಗಡೆ ಮಾಡಿ ತುರ್ತು ಕ್ರಮ ಕೈಗೊಂಡು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಾಣವಾಗುತ್ತಿರುವ ವಸತಿ ಯೋಜನೆಯ ಫಲಾನುಭವಿಗಳ ಶುಲ್ಕವನ್ನು 25 ಸಾವಿರ ರೂಗಳಿಗೆ ಇಳಿಕೆ ಮಾಡಲು ಪ್ರಸಕ್ತ ಬಜೆಟ್‌ನಲ್ಲಿ ಘೋಷಣೆ ಮಾಡಬೇಕೆಂದು ಮನವಿಯ ಮೂಲಕ ಒತ್ತಾಯಿಸಿದರು.

ವಕ್ಫ್ ತಿದ್ದುಪಡಿ ಮಸೂದೆ ಮಂಡನೆಗೆ ವಿರೋಧ

■ ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 13, 2025ರಂದು ರಾಜ್ಯಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ 2024 ಮಂಡನೆಯನ್ನು ವಿರೋಧಿಸಿ ಸೋಷಿಯಲ್ ಡೆಮೊಕ್ರೆಟಿಕ್ ಪಾರ್ಟಿ ಆಫ್ ಇಂಡಿಯಾ (SDPI) ಗದಗ ಜಿಲ್ಲಾ ಸಮಿತಿ ವತಿಯಿಂದ ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಅವರ ನೇತೃತ್ವದಲ್ಲಿ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ, ಈ ಮಸೂದೆ ಅಸಾಂವಿಧಾನಿಕ ಮಾತ್ರವಲ್ಲದೇ ವಕ್ಫ್ ಸಂಪತ್ತನ್ನು ಕಸಿಯುವ ಕೋಮುವಾದಿ ಸರ್ಕಾರದ ಹುನ್ನಾರವಾಗಿದೆ. ಜಿಲ್ಲಾಧಿಕಾರಿಗಳಿಗೆ ನ್ಯಾಯಾಂಗ ಅಧಿಕಾರ ನೀಡುವುದು ಸಂಪೂರ್ಣವಾಗಿ ಅನ್ಯಾಯಕರ ಮತ್ತು ಸಂವಿಧಾನ ವಿರೋಧಿಯಾಗಿದೆ.

ಈ ಮಸೂದೆಯನ್ನು ಹಿಂದಕ್ಕೆ ತೆಗೆದುಕೊಳ್ಳದಿದ್ದರೆ ದೇಶದಾದ್ಯಂತ ಅಂಂ, ಓಖಿಅ ಮಾದರಿಯ ಪ್ರತಿಭಟನೆಗಳು ನಡೆಯಲಿವೆ ಎಂದು ಒಕ್ಕೂಟದ ಪರವಾಗಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ವಕ್ಫ್ ಕಾಯ್ದೆಯ ಅನುಷ್ಠಾನವನ್ನು ಃಎಕ ತನ್ನ ಬಹುಮತದ ಬಲದಿಂದ ದುರುಪಯೋಗಪಡಿಸಿಕೊಂಡು ದೇಶವನ್ನು ಕೇಸರಿ ಬಣ್ಣದಿಂದ ಮುಚ್ಚಲು ಪ್ರಯತ್ನಿಸುತ್ತಿದೆ. ಈ ಮಸೂದೆ ಮುಸ್ಲಿಂ ಸಮುದಾಯದ ಹಕ್ಕುಗಳ ಮೇಲೆ ನೇರ ದಾಳಿ, ಹಾಗೆಯೇ ವಕ್ಫ್ ಸಂಸ್ಥೆಗಳ ಶಕ್ತಿಯನ್ನು ಕುಂದಿಸುತ್ತಿವೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಗದಗ ವಿಧಾನಸಭಾ ಕ್ಷೇತ್ರ ಸಮಿತಿಯ ಅಧ್ಯಕ್ಷ ಅಫ್ಫಾನ್ ತರಫದಾರ್, ಜಿಲ್ಲಾ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಎಸ್‌ಡಿಪಿಐ ಮುಖಂಡರಾದ ಅನ್ವರ್ ಮುಲ್ಲಾ, ಜಿಲಾನಿ ಲಕ್ಕುಂಡಿ, ಮುಸ್ತಾಕ್ ಕಟ್ಟಿಮನಿ, ಇಸ್ಮಾಯಿಲ್ ಅಣ್ಣಿಗೇರಿ ಇತರರು ಉಪಸ್ಥಿತರಿದ್ದರು.

ವೈನ್ ಶಾಪ್‌ಗಳಲ್ಲಿ ಪ್ಲಾಸ್ಟಿಕ್ ಗ್ಲಾಸ್ ಬಳಸದಂತೆ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಗೂ ಮುಖ್ಯಾಧಿಕಾರಿಗಳು ಮಂಗಳವಾರ ಸ್ಥಳೀಯ ಹೀರಾ ವೈನ್ ಶಾಪ್ ಮತ್ತು ವಿಶಾಲ ಬಾರ್‌ಗಳಿಗೆ ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯ ಸಹಕಾರದಲ್ಲಿ ಭೇಟಿ ನೀಡಿ ಪ್ಲಾಸ್ಟಿಕ್ ಗ್ಲಾಸ್‌ಗಳನ್ನು ಬಳಸದಂತೆ ಎಚ್ಚರಿಕೆ ನೀಡಿ, ಅಂಗಡಿಯಲ್ಲಿದ್ದ ಪ್ಲಾಸ್ಟಿಕ್ ಜಪ್ತಿ ಕೈಗೊಂಡಿರು.

ಈ ವೇಳೆ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಮಾತನಾಡಿ, ಈ ಎರಡೂ ಬಾರ್‌ಗಳು ಮುಖ್ಯ ರಸ್ತೆಯ ಪಕ್ಕದಲ್ಲಿ ಇರುವುದರಿಂದ ಸಾರಾಯಿ ಕುಡಿದ ಪ್ಲಾಸ್ಟಿಕ್ ಗ್ಲಾಸ್‌ಗಳು ಎಲ್ಲೆಂದರಲ್ಲಿ ಹರಡುತ್ತಿದೆ. ಇದರಿಂದ ಅಕ್ಕಪಕ್ಕದ ಮನೆಯವರಿಗೆ ಸಾಕಷ್ಟು ತೊಂದ-ರೆಯಾಗತ್ತಿದೆ. ಆದ್ದರಿಂದ ಈ ಎರಡು ಮದ್ಯದಂಗಡಿ ಮಾಲೀಕರಿಗೆ ಪ್ಲಾಸ್ಟಿಕ್ ಬಳಸದಂತೆ ಸೂಚನೆ ನೀಡಲಾಗಿದೆ ಎಂದರು.

ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಮಾತನಾಡಿ, ಈಗಾಗಲೇ ಪಟ್ಟಣ ಪಂಚಾಯಿತಿಯಿಂದ ದಿನಸಿ ಅಂಗಡಿ, ತರಕಾರಿ ಅಂಗಡಿ ಹಾಗೂ ಹೋಟಲ್‌ಗಳಲ್ಲಿ ಪ್ಲಾಸ್ಟಿಕ್ ಕವರ್ ಬಳಸದಂತೆ ಸೂಚಿಸಲಾಗಿದೆ.

ಈ ಎರಡು ಬಾರ್‌ಗಳ ಪಕ್ಕದಲ್ಲಿ ಮನೆಗಳು ಮತ್ತು ದೇವಸ್ಥಾನಗಳಿದ್ದು, ಭಕ್ತರಿಗೆ ಸಾಕಷ್ಟು ಸಮಸ್ಯೆ ಎದುರಾಗುತ್ತಿದೆ ಎಂದು ಸಾರ್ವಜನಿಕರು ಕಚೇರಿಗೆ ದೂರು ನೀಡಿದ್ದರು. ಆದ್ದರಿಂದ ನಾವು ಅಧ್ಯಕ್ಷರ ನೇತೃತ್ವದಲ್ಲಿ ಸ್ಥಳೀಯ ಹೀರಾ ವೈನ್ಸ್ ಮತ್ತು ವಿಶಾಲ ಬಾರ್‌ಗಳಿಗೆ ಭೇಟಿ ನೀಡಿ ಮಾಲೀಕರಿಗೆ ಪ್ಲಾಸ್ಟಿಕ್ ಬಳಸದಂತೆ ಎಚ್ಚರಿಕೆ ನೀಡಿದ್ದೇವೆ. ಅಲ್ಲದೆ ಅವರಲ್ಲಿದ್ದ, ಪ್ಲಾಸ್ಟಿಕ್ ಗ್ಲಾಸ್‌ಗಳನ್ನು ಜಪ್ತಿ ಕೂಡ ಮಾಡಲಾಗಿದೆ ಎಂದರು.

ಪ.ಪಂ ಸಿಬ್ಬಂದಿ ಶಂಕ್ರಪ್ಪ ದೊಡ್ಡಣ್ಣವರ, ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಇದ್ದರು.

ವಸತಿ ಶಾಲೆಗಳ ಪ್ರವೇಶಾತಿ ಪರೀಕ್ಷೆಗಳು ಫೆ.15ಕ್ಕೆ

ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಪ್ರವೇಶಾತಿ ಪರೀಕ್ಷೆಗಳು ಫೆ.15ರಂದು ಜರುಗಲಿವೆ. ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ-ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜಿಲ್ಲೆಯ ಪರೀಕ್ಷಾ ಕೇಂದ್ರಗಳದಾ ಎಚ್.ಸಿ.ಇ.ಎಸ್ ಪದವಿಪೂರ್ವ ಕಾಲೇಜು, ಗದಗ (JG0022), ತೋಂಟದ ಸಿದ್ದೇಶ್ವರ ಪದವಿಪೂರ್ವ ಕಾಲೇಜು ಗದಗ (JG0335), ವಿ.ಡಿ.ಎಸ್.ಟಿ ಬಾಲಕಿಯರ ಪದವಿಪೂರ್ವ ಕಾಲೇಜು ಗದಗ (JG0024), ಎ.ಎಸ್. ಎಸ್ ಪದವಿಪೂರ್ವ ಕಾಲೇಜು ಗದಗ (JG0026), ಕೆ.ಎಲ್.ಇ ಸೊಸೈಟೀಸ್ ಜಗದ್ಗುರು ತೋಂಟದಾರ್ಯ ಪದವಿಪೂರ್ವ ಕಾಲೇಜು ಗದಗ (JG0020), ಸರಕಾರಿ ಪದವಿಪೂರ್ವ ಕಾಲೇಜು, ನರಗುಂದ (JG0155), ನವೋದಯ ಸಂಯುಕ್ತ ಪದವಿಪೂರ್ವ ಕಾಲೇಜು ನರಗುಂದ (JG0197), ಲಯನ್ಸ್ ಸ್ವತಂತ್ರ ಪದವಿಪೂರ್ವ ಕಾಲೇಜು ನರಗುಂದ (JG0203), ವೀರ ರಾಣಿ ಚನ್ನಮ್ಮ ಪದವಿಪೂರ್ವ ಕಾಲೇಜು ರೋಣ (JG0234), ನ್ಯೂ ಲಿಟಲ್ ಫ್ಲಾವರ್ಸ್ ಪ್ರಾಥಮಿಕ ಶಾಲೆ ರೋಣ (JG0483), ವಿ.ಎಫ್. ಪಾಟೀಲ ಪ್ರೌಢಶಾಲೆ ರೋಣ (JG0701), ಶ್ರೀ ಶರಣ ಬಸವೇಶ್ವರ ಪ್ರೌಢಶಾಲೆ ರೋಣ (JG0702), ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜು ಗಜೇಂದ್ರಗಡ (JG0046), ಶ್ರೀ ಅನ್ನದಾನೇಶ್ವರ ಪದವಿಪೂರ್ವ ಕಾಲೇಜು ಗಜೇಂದ್ರಗಡ (JG0404), ಸರಕಾರಿ ಪದವಿಪೂರ್ವ ಕಾಲೇಜು ಗಜೇಂದ್ರಗಡ (JG0264), ಸರಕಾರಿ ಪದವಿಪೂರ್ವ ಕಾಲೇಜು ಮುಂಡರಗಿ (JG0196), ಜೆ.ಎ. ಪದವಿಪೂರ್ವ ಕಾಲೇಜು ಮುಂಡರಗಿ (JG0021), ವಿ.ಜಿ. ಲಿಂಬಿಕಾಯಿ ಪ್ರೌಢಶಾಲೆ ಮುಂಡರಗಿ (JG0703), ಎಂ.ಎಸ್. ಡಂಬಳ ಬಾಲಕಿಯರ ಪದವಿಪೂರ್ವ ಕಾಲೇಜು ಮುಂಡರಗಿ (JG0202), ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜು ಶಿರಹಟ್ಟಿ (JG0027), ಸರಕಾರಿ ಪದವಿಪೂರ್ವ ಕಾಲೇಜು ಶಿರಹಟ್ಟಿ (JG0279), ಎಸ್. ಎಫ್.ಸಿ ಇಂಗ್ಲೀಷ್ ಮಿಡಿಯಂ ಸ್ಕೂಲ್ ಶಿರಹಟ್ಟಿ (JG0704), ಬಿ.ಸಿ.ಎನ್ ಪದವಿಪೂರ್ವ ಕಾಲೇಜು ಲಕ್ಷ್ಮೇಶ್ವರ (JG0258), ಸರಕಾರಿ ಪದವಿಪೂರ್ವ ಕಾಲೇಜು ಲಕ್ಷೇಶ್ವರ (JG0191) ಈ ಎಲ್ಲ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಫೆ. 15ರಂದು ಮದ್ಯಾಹ್ನ 1.30ರಿಂದ ಮಧ್ಯಾಹ್ನ 5.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಹಾಗೂ ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾ